ಸಂಪುಟ : 11 ಸಂಚಿಕೆ: 33 ಪುಟ : 4+2 ಬೆಲೆ: 3.00 ಬುಧವಾರ ಮಾರ್ಚ್ 04 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYASAKSHI KANNADA DAILY ಕನ್ನಡ ದಿನಪತ್ರಿಕೆ




Volume : 11 Issue : 33 Pages : 4+2 Price : 3.00 Wednesday March 04 2026 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

### ಪಂ. ಪುಟ್ಟರಾಜ ಗವಾಯಿಗಳವರ 112ನೇ ಜಯಂತಿ, ಸರ್ವಧರ್ಮ ಸಾಮೂಹಿಕ ವಿವಾಹ

## ನವ ದಂಪತಿಗಳು ನಡೆ-ನುಡಿಗಳ ಪರಿಶುದ್ಧತೆಯೊಂದಿಗೆ ಬಾಳಿ



**■ವಿಜಯಸಾಕ್ಷಿ ಸುದ್ದಿ, ಗದಗ**


ಯಾವ ವ್ಯಕ್ತಿ ತನ್ನನ್ನು ತಾನು ಸಮಾಜಕ್ಕೆ ಅರ್ಪಿಸಿಕೊಳ್ಳುತ್ತಾನೋ ಅಂತಹ ಮಹಾನ್ ವ್ಯಕ್ತಿಗಳನ್ನು ಸಮಾಜವು ಸದಾ ಸ್ಮರಿಸುತ್ತದೆ. ಅಂತಹ ಮಹನೀಯರ ಸಾಲಿನಲ್ಲಿ ಪಂ. ಪುಟ್ಟರಾಜ ಕವಿಗವಾಯಿಗಳು ಪ್ರಮುಖರಾಗಿದ್ದಾರೆ ಎಂದು ತೆ-ೂಂಟದಾರ್ಯ ಶ್ರೀಮಠದ ಪೂಜ್ಯಶ್ರೀ ಡಾ. ಸಿದ್ಧರಾಮ ಮಹಾಸ್ವಾಮಿಗಳು ಹೇಳಿದರು.

ಅವರು ನಗರದ ಎಪಿಎಂಸಿ ಯಾರ್ಡ್‌ನಲ್ಲಿ ಪಂ. ಪುಟ್ಟರಾಜ ಕವಿ ಗವಾಯಿಗಳವರ 112ನೇ ಜಯಂತಿ ಮತ್ತು ಸರ್ವಧರ್ಮ ಸಾಮೂಹಿಕ ವಿವಾಹ ಮಹೋತ್ಸವನ್ನು ಉದ್ಘಾಟಿಸಿ ಮಾತನಾಡಿದರು.

ಕಳೆದ 12 ವರ್ಷಗಳಿಂದ ಪೀರಸಾಬ ಕೌತಾಳ ದಂಪತಿಗಳು ಕೆ.ಎಚ್. ಪಾಟೀಲ ಅಭಿಮಾನಿ ಬಳಗದ ವತಿಯಿಂದ ಪಂ. ಪುಟ್ಟರಾಜ ಗವಾಯಿಗಳವರ ಜಯಂತಿ ಹಾಗೂ ಸರ್ವಧರ್ಮೀಯರ ಸಾಮೂಹಿಕ ವಿವಾಹವನ್ನು ಅರ್ಥವಂತಿಕೆಯಿಂದ ಆಚರಿಸಿಕೊಂಡು ಬರುತ್ತಿದ್ದಾರೆ. ನೂತನ ದಂಪತಿಗಳು ಬಸವಾದಿ ಶರಣರಂತೆ ನಡೆ-ನುಡಿಗಳನ್ನು ಪರಿಶುದ್ಧವಾಗಿಟ್ಟುಕೊಂಡು ಪ್ರೀತಿ, ವಿಶ್ವಾಸದಿಂದ ಬದುಕನ್ನು ಸಾಗಿಸಬೇಕು ಎಂದು ಹೇಳಿದರು.

ಯುವ ಮುಖಂಡ ಕೃಷ್ಣಗೌಡ ಪಾಟೀಲ ಮಾತನಾಡಿ, ಪಂ. ಪುಟ್ಟರಾಜ ಕವಿ ಗವಾಯಿಗಳು ಅಂಧರಿಗೆ ಕಣ್ಣಾಗಿ ಬದುಕಿ, ನಮ್ಮೆಲ್ಲರಿಗೂ ಪ್ರೇರಣಾ ದೀಪವಾಗಿದ್ದಾರೆ. ಇಂತಹ ಪವಿತ್ರವಾದ ದಿನದಲ್ಲಿ ಕೆ.ಎಚ್. ಪಾಟೀಲ ಅಭಿಮಾನಿ ಬಳಗದಿಂದ ಸತತ 12 ವರ್ಷಗಳಿಂದ ಪುಟ್ಟರಾಜ ಗವಾಯಿಗಳವರ ಜಯಂತಿ ಆಚರಣೆ ಮತ್ತು ಸಾಮೂಹಿಕ ವಿವಾಹ ಮಾಡುತ್ತ ಬಂದಿರುವ ಪೀರಸಾಬ ಕೌತಾಳ ದಂಪತಿಗಳಿಗೆ ಈಗ ಇದು ಕಾರ್ಯವಾಗಿ ಉಳಿದಿಲ್ಲ, ಸಂಸ್ಕಾರವಾಗಿ ಬೆಳೆದು ಬಂದಿದೆ ಎಂದು ಹೇಳಿದರು.

ಇದೇ ಸಂದರ್ಭದಲ್ಲಿ ಪಂ. ಪುಟ್ಟರಾಜ ಗವಾಯಿಗಳವರು ರಚಿಸಿದ ವೀರಭದ್ರೇಶ್ವರ ಪುರಾಣ ಗ್ರಂಥವನ್ನು ಲೋಕಾರ್ಪಣೆ ಮಾಡಲಾಯಿತು. ಕಲ್ಲಯ್ಯಜ್ಜನವರಿಗೆ 3067ನೇ ತುಲಾಭಾರ ಸೇವೆ ಸಲ್ಲಿಸಲಾಯಿತು. 112 ಕೆ.ಜಿ ತೂಕದ ಕೇಕ್‌ನ್ನು ಕತ್ತರಿಸಲಾಯಿತು. 19 ಜೋಡಿಗಳು ನೂತನ ದಾಂಪತ್ಯಕ್ಕೆ ಕಾಲಿಟ್ಟರು. ದಿ. ಕೆ.ಎಚ್. ಪಾಟೀಲ ಪ್ರಶಸ್ತಿಯನ್ನು ಕೊಪ್ಪಳದ ಸಂಗೀತ ಕಲಾವಿದರಾದ ಸದಾಶಿವ ಪಾಟೀಲ ಅವರಿಗೆ ನೀಡಲಾಯಿತು. ಧಾರವಾಡದ ನ್ಯಾಯವಾದಿ ಗುರು ಹಿರೇಮಠ, ಗದಗ ಜಿಲ್ಲಾ ಸರಕಾರಿ ನೌಕರರ ಸಂಘದ ಅಧ್ಯಕ್ಷ ಡಾ. ಬಸವರಾಜ ಬಳ್ಳಾರಿ, ಪತ್ರಕರ್ತರಾದ ರಘೋತ್ತಮ ಕೊಪ್ಪರ, ವಿಕಸಿತ ಯುವ ಸಂಸತ್ ಮಹೋತ್ಸವದಲ್ಲಿ ರಾಜ್ಯವನ್ನು ಪ್ರತಿನಿಧಿಸಿದ ತೋಂಟದಾರ್ಯ ಇಂಜಿನಿಯರಿಂಗ್ ಕಾಲೇಜಿನ ವಿದ್ಯಾರ್ಥಿನಿ ಬಿ. ಮಾನ್ಯ ಶೆಟ್ಟಿ ಅವರನ್ನು ಸನ್ಮಾನಿಸಲಾಯಿತು.



ಕಪೋತಗಿರಿ ನಂದಿವೇರಿ ಶ್ರೀಮಠದ ಪೂಜ್ಯಶ್ರೀ ಶಿವಕುಮಾರ ಸ್ವಾಮಿಗಳು ಮಾತನಾಡಿ, ಹಿಂದೆ ಅವಿಭಕ್ತ ಕುಟುಂಬಗಳಲ್ಲಿ ಭಯಭಕ್ತಿ ಇದ್ದುದರಿಂದ ಅವರು ಗೌರಯುತವಾಗಿ ಜೀವನ ನಡೆಸುತ್ತಿದ್ದರು. ಇಂದು ಹಿರಿಯರು ಇಲ್ಲದೆ, ಗಂಡ-ಹೆಂಡತಿ ಮಾತ್ರ ಇರಲು ಬಯಸಿ ಪರಸ್ಪರ ಅರಿತುಕೊಳ್ಳದೆ ಇರುವದರಿಂದ ವಿಚ್ಛೇದನಗಳು ಹೆಚ್ಚಾಗಲು ಕಾರಣವಾಗಿದೆ ಎಂದು ಹೇಳಿದರು.

ಅಡ್ನೂರ-ರಾಜೂರ-ಗದಗ ದಾಸೋಹಮಠದ ಪೂಜ್ಯಶ್ರೀ ಅಭಿನವ ಪಂಚಾಕ್ಷರ ಶಿವಾಚಾರ್ಯ ಮಹಾಸ್ವಾಮಿಗಳು ಮಾತನಾಡಿ, ಪಂ. ಪುಟ್ಟರಾಜ ಗವಾಯಿಗಳು ಅಂಧ-ಅನಾಥರಿಗಾಗಿ ತಮ್ಮ ಇಡೀ ಜೀವನವನ್ನು ಅರ್ಪಿಸಿ ಅವರ ಭಿಕ್ಷೆ ಪಾತ್ರೆ ಬಿಡಿಸಿ ಅವರಿಗೆ ಅಕ್ಷಯ ಪಾತ್ರೆ ನೀಡಿ ಮಹಾನ್ ಯೋಗಿಯಾಗಿದ್ದಾರೆ ಎಂದು ಹೇಳಿದರು.

ವೇದಿಕೆ ಮೇಲೆ ತುಮಕೂರಿನ ನೋಣವಿನಕೇರಿ ಕಾಡಸಿದ್ಧೇಶ್ವರ ಶ್ರೀಮಠದ ಅಭಿನವ ಕಾಡಸಿದ್ಧೇಶ್ವರ ಸ್ವಾಮಿಗಳು, ಮಲ್ಲಸಮುದ್ರದ ಓಂಕಾರೇಶ್ವರ ಶ್ರೀಮಠದ ಪೂಜ್ಯಶ್ರೀ ಪಕ್ಕೀರೇಶ್ವರ ಶಿವಾಚಾರ್ಯ ಮಹಾಸ್ವಾಮಿಗಳು, ▸▸3ನೇ ಪುಟಕ್ಕೆ

## ಹೋಳಿ ಹಬ್ಬ ಹಿನ್ನೆಲೆ: ಗದಗ ಜಿಲ್ಲೆಯಲ್ಲಿ ಮದ್ಯ ಮಾರಾಟ-ಸಾಗಾಟ ನಿಷೇಧ

**■ವಿಜಯಸಾಕ್ಷಿ ಸುದ್ದಿ, ಗದಗ**

ಹೋಳಿ ಹಬ್ಬದ ಅಂಗವಾಗಿ ಗದಗ ಜಿಲ್ಲೆಯಾದ್ಯಂತ ಮಾರ್ಚ್ 3 ರಿಂದ 7ರವರೆಗೆ ವಿವಿಧೆಡೆ ಆಚರಣೆಗಳು ನಡೆಯಲಿರುವ ಹಿನ್ನೆಲೆಯಲ್ಲಿ ಕಾನೂನು ಸುವ್ಯವಸ್ಥೆ ಹಾಗೂ ಸಾರ್ವಜನಿಕ ಶಾಂತಿ ಕಾಪಾಡುವ ಉದ್ದೇಶದಿಂದ ಜಿಲ್ಲಾಡಳಿತವು ಮದ್ಯ ಮಾರಾಟ ಮತ್ತು ಸಾಗಾಟಕ್ಕೆ ತಾತ್ಕಾಲಿಕ ನಿಷೇಧ ಹೇರಿದೆ.

ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿಗಳ ಆದೇಶದಂತೆ, ವಿವಿಧ ಪೊಲೀಸ್ ಠಾಣಾ ವ್ಯಾಪ್ತಿಗಳಲ್ಲಿ ಕೆಳಕಂಡ ಅವಧಿಯಲ್ಲಿ ಮದ್ಯ ಮಾರಾಟ ಮತ್ತು ಸಾಗಾಟ ನಿಷೇಧಿಸಲಾಗಿದೆ: ಮಾರ್ಚ್ 6ರ ಮಧ್ಯರಾತ್ರಿಯಿಂದ ಮಾರ್ಚ್ 8ರ ಬೆಳಿಗ್ಗೆ 6ರವರೆಗೆ: ಗದಗ-ಬೆಟಗೇರಿ ಅವಳಿ ನಗರ ಹಾಗೂ ಗದಗ ಗ್ರಾಮೀಣ ಠಾಣಾ ವ್ಯಾಪ್ತಿಯ ನಗರಕ್ಕೆ ಹೊಂದಿಕೊಂಡ ಪ್ರದೇಶಗಳು, ಮಾರ್ಚ್ 2ರ ಮಧ್ಯರಾತ್ರಿಯಿಂದ ಮಾರ್ಚ್ 3ರ ಮಧ್ಯರಾತ್ರಿವರೆಗೆ: ಗದಗ ಗ್ರಾಮೀಣ ಠಾಣಾ ವ್ಯಾಪ್ತಿಯ ಹಳ್ಳಿಗಳು, ಮಾರ್ಚ್ 3ರ ಮಧ್ಯರಾತ್ರಿಯಿಂದ ಮಾರ್ಚ್ 5ರ ಬೆಳಿಗ್ಗೆ 6ರವರೆಗೆ: ಮುಳಗುಂದ ಮತ್ತು ಶಿರಹಟ್ಟಿ ಠಾಣಾ ವ್ಯಾಪ್ತಿ, ಮಾರ್ಚ್ 3ರ ಬೆಳಿಗ್ಗೆ 6ರಿಂದ ಮಾರ್ಚ್ 4ರ ಮಧ್ಯರಾತ್ರಿವರೆಗೆ ರೋಣ ಮತ್ತು ಗಜೇಂದ್ರಗಡ ಠಾಣಾ ವ್ಯಾಪ್ತಿ, ಮಾರ್ಚ್ 4ರ ಬೆಳಿಗ್ಗೆ 6ರಿಂದ ಮಧ್ಯರಾತ್ರಿವರೆಗೆ: ನರಗುಂದ ಶಹರ ಹಾಗೂ ತಾಲೂಕು ಠಾಣಾ ವ್ಯಾಪ್ತಿ, ಮಾರ್ಚ್ 5ರ ಬೆಳಿಗ್ಗೆ 6ರಿಂದ ಮಧ್ಯರಾತ್ರಿವರೆಗೆ: ನರಗುಂದ ಠಾಣಾ ವ್ಯಾಪ್ತಿಯ ಕೊಣ್ಣೂರು ಹೊರಠಾಣಾ ವ್ಯಾಪ್ತಿಯ ಶಿರೋಳ ಗ್ರಾಮ, ಮಾರ್ಚ್ 2ರ ಮಧ್ಯರಾತ್ರಿಯಿಂದ ಮಾರ್ಚ್ 4ರ ಮಧ್ಯರಾತ್ರಿವರೆಗೆ: ನರೇಗಲ್ ಠಾಣಾ ವ್ಯಾಪ್ತಿ, ಮಾರ್ಚ್ 3ರ ಬೆಳಿಗ್ಗೆ 6ರಿಂದ ಮಾರ್ಚ್ 4ರ ಮಧ್ಯರಾತ್ರಿವರೆಗೆ: ಮುಂಡರಗಿ ಠಾಣಾ ವ್ಯಾಪ್ತಿ ಹಾಗೂ ಮಾರ್ಚ್ 6ರ ಮಧ್ಯರಾತ್ರಿಯಿಂದ ಮಾರ್ಚ್ 7ರ ಮಧ್ಯರಾತ್ರಿವರೆಗೆ ಲಕ್ಷ್ಮೇಶ್ವರ ಠಾಣಾ ▸▸3ನೇ ಪುಟಕ್ಕೆ

### ಪಿಯುಸಿ ಪರೀಕ್ಷಾ ಕೇಂದ್ರಗಳಿಗೆ ಜಿ.ಪಂ ಸಿಇಓ ಭುವನೇಶ ಪಾಟೀಲ ಭೇಟಿ, ಪರಿಶೀಲನೆ

## ನಿಯಂತ್ರಣ ಕೊಠಡಿಯಿಂದಲೇ ವೆಬ್ ಕಾಸ್ಟಿಂಗ್ ಮಾನಿಟರಿಂಗ್

**■ವಿಜಯಸಾಕ್ಷಿ ಸುದ್ದಿ, ಧಾರವಾಡ**

ದ್ವಿತೀಯ ಪಿಯುಸಿ ಪರೀಕ್ಷೆಗಳು ನಡೆಯುತ್ತಿರುವ ಹಿನ್ನೆಲೆಯಲ್ಲಿ ಪರೀಕ್ಷಾ ಕೇಂದ್ರಗಳಲ್ಲಿ ಪಾರದರ್ಶಕತೆ ಮತ್ತು ಶಿಸ್ತು ಕಾಪಾಡುವ ಉದ್ದೇಶದಿಂದ ಜಿಲ್ಲಾ ಪಂಚಾಯತ ಕಚೇರಿಯಲ್ಲಿ ವೆಬ್ ಕಾಸ್ಟಿಂಗ್ ವ್ಯವಸ್ಥೆಯನ್ನು ಸ್ಥಾಪಿಸಲಾಗಿದೆ ಎಂದು ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭುವನೇಶ ಪಾಟೀಲ ಹೇಳಿದರು.

ಅವರು ಮಂಗಳವಾರ ಬೆಳಿಗ್ಗೆ ಧಾರವಾಡ ಜಿಲ್ಲೆಯ ವಿವಿಧ ಕಾಲೇಜುಗಳಿಗೆ ಭೇಟಿ ನೀಡಿ, ನಂತರ ವೆಬ್ ಕಾಸ್ಟಿಂಗ್ ಕೇಂದ್ರಕ್ಕೆ ಭೇಟಿ ನೀಡಿ, ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದರು.

ಜಿಲ್ಲೆಯಲ್ಲಿ ಒಟ್ಟು 43 ಪರೀಕ್ಷಾ ಕೇಂದ್ರಗಳ ಚಟುವಟಿಕೆಗಳನ್ನು ನೇರ



ಪ್ರಸಾರ (ಲೈವ್ ಸ್ಟ್ರೀಮಿಂಗ್) ಮೂಲಕ ವೀಕ್ಷಿಸಲಾಗುತ್ತಿದೆ. ಇಂದು ಇಂಗ್ಲೀಷ್ ವಿಷಯದ ಪರೀಕ್ಷೆ ನಡೆಯುತ್ತಿದ್ದು, ವಿದ್ಯಾರ್ಥಿಗಳು ವಿವಿಧ ಕೇಂದ್ರಗಳಲ್ಲಿ ಪರೀಕ್ಷೆಯನ್ನು ಬರೆಯುತ್ತಿದ್ದಾರೆ. ನಿಯಂತ್ರಣ ಕೊಠಡಿಯಿಂದಲೇ ಎಲ್ಲಾ 43 ಕೇಂದ್ರಗಳ ವೆಬ್ ಕಾಸ್ಟಿಂಗ್ ಅನ್ನು ಮಾನಿಟರಿಂಗ್ ಮಾಡಲಾಗುತ್ತಿದೆ ಎಂದು ಹೇಳಿದರು.

ಎಲ್ಲಾ ಕೇಂದ್ರಗಳಲ್ಲಿಯೂ ಶಾಂತಿಯುತ ಮತ್ತು ಸುವ್ಯವಸ್ಥಿತ ವಾತಾವರಣದಲ್ಲಿ ಯಾವುದೇ ಗೊಂದಲವಿಲ್ಲದೆ ಪರೀಕ್ಷೆಗಳು ಸುಸೂತ್ರವಾಗಿ ನಡೆಯುತ್ತಿವೆ. ವಿದ್ಯಾರ್ಥಿಗಳು ಆತ್ಮವಿಶ್ವಾಸದಿಂದ ಮತ್ತು ನಿರ್ಭಯವಾಗಿ ಪರೀಕ್ಷೆಯನ್ನು ಬರೆಯುವಂತೆ ಸೂಕ್ತ ವ್ಯವಸ್ಥೆ ಕಲ್ಪಿಸಲಾಗಿದೆ ಎಂದು ತಿಳಿಸಿದರು.

ಪರೀಕ್ಷೆಗಳ ಕುರಿತಾಗಿ ನಿಯೋಜಿತ ಪರೀಕ್ಷಾ ಅಧಿಕಾರಿ, ಸಿಬ್ಬಂದಿಗಳೊಂದಿಗೆ ಚರ್ಚಿಸಿ, ಮಾಹಿತಿ ಪಡೆದುಕೊಂಡರು. ದ್ವಿತೀಯ ಪಿಯುಸಿ ಪರೀಕ್ಷೆಗಳ ಕುರಿತು ವೆಬ್ ಸ್ಟ್ರೀಮಿಂಗ್ ಕೇಂದ್ರಗಳಿಂದ ಸಿಇಓ ಭುವನೇಶ ಪಾಟೀಲ ಅವರು ಪರೀಕ್ಷಾ ಕೇಂದ್ರಗಳಿಗೆ ದೂರವಾಣಿ ಕರೆ ಮಾಡಿ, ಪರೀಕ್ಷೆ ಆಯೋಜನೆ ಬಗ್ಗೆ ಹಾಗೂ ವಿದ್ಯಾರ್ಥಿಗಳ ಪ್ರತಿಕ್ರಿಯೆಗಳ ಬಗ್ಗೆ ಮಾಹಿತಿ ಪಡೆದುಕೊಂಡರು.

ಈ ಸಂದರ್ಭದಲ್ಲಿ ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪನಿರ್ದೇಶಕಿ ಡಾ. ತೇಜಸ್ವಿನಿ ನಾರಾಯಣಕರ ಇದ್ದರು.

ಸಿಇಓ ಭುವನೇಶ ಪಾಟೀಲ ದ್ವಿತೀಯ ಪಿಯುಸಿ ಪರೀಕ್ಷೆಗಳು ನಡೆಯುತ್ತಿರುವ ಕರ್ನಾಟಕ ಕಾಲೇಜು, ಸರ್ಕಾರಿ ಪದವಿಪೂರ್ವ ಕಾಲೇಜು, ಮಾಳಮಡ್ಡಿಯ ಕೆ.ಇ. ಬೋರ್ಡ್ ಕಾಲೇಜುಗಳ ಪರೀಕ್ಷಾ ಕೇಂದ್ರಗಳಿಗೆ ಅನಿರೀಕ್ಷಿತ ಭೇಟಿ ನೀಡಿ, ಪರಿಶೀಲಿಸಿದರು. ಕಾಲೇಜುಗಳಲ್ಲಿ ಸ್ಥಾಪಿಸಿರುವ ಸಿಸಿ ಟಿವಿ ನಿರ್ವಹಣಾ ಕೊಠಡಿಗೆ ಭೇಟಿ ನೀಡಿ, ಮಾಹಿತಿ ಪಡೆದುಕೊಂಡರು.

ಪರೀಕ್ಷಾ ಕೊಠಡಿಗಳಿಗೆ ತೆರಳಿ ವಿದ್ಯಾರ್ಥಿಗಳು ಶಿಸ್ತಿನಿಂದ ಹಾಗೂ ಆತ್ಮ ವಿಶ್ವಾಸದಿಂದ ಪರೀಕ್ಷೆ ಬರೆಯುತ್ತಿರುವದನ್ನು ಗಮನಿಸಿದರು. ಸ್ಥಳದಲ್ಲಿದ್ದ ಜಾಗೃತ ದಳದ ಹಾಗೂ ಕಾಲೇಜು ಸಿಬ್ಬಂದಿಗಳಿಗೆ ಪ್ರಶ್ನೆ ಪತ್ರಿಕೆ ಗೌಪ್ಯತೆಯನ್ನು ಕಾಪಾಡುವಂತೆ ಹಾಗೂ ನಕಲು ನಡೆಯದಂತೆ ಮುನ್ನಚ್ಚರಿಕೆ ವಹಿಸಲು ಹಾಗೂ ಅಗತ್ಯ ಭದ್ರತಾ ಕ್ರಮಗಳನ್ನು ಕೈಗೊಳ್ಳುವಂತೆ ನಿರ್ದೇಶಿಸಿದರು.

### *ಡಾ. ಪಂ. ಪುಟ್ಟರಾಜ ಕವಿ ಗವಾಯಿಗಳ ಜಯಂತಿ ಅಂಗವಾಗಿ ರಕ್ತದಾನ ಶಿಬಿರ

## 30 ಜನರಿಂದ ರಕ್ತದಾನ - 80ಕ್ಕೂ ಹೆಚ್ಚು ಜನರ ರಕ್ತಗುಂಪು ಪರೀಕ್ಷೆ




**■ವಿಜಯಸಾಕ್ಷಿ ಸುದ್ದಿ, ಗದಗ**

ಪಂಡಿತ ಪುಟ್ಟರಾಜ ಕವಿ ಗವಾಯಿಗಳ ಜಯಂತಿ ಅಂಗವಾಗಿ ಗದಗ ಭಾವಸಾರ ವ್ಹಿಜನ್ ಇಂಡಿಯಾ, ಪಂ. ಪಂಚಾಕ್ಷರ ಗವಾಯಿಗಳವರ ಕಲಾ ಮಹಾವಿದ್ಯಾಲಯದ ಯುಥ್ ರೆಡ್‌ಕ್ರಾಸ್ ಹಾಗೂ ಅಂಬಿಕಾ ರಕ್ತನಿಧಿ ಕೇಂದ್ರದ ಸಂಯುಕ್ತ ಆಶ್ರಯದಲ್ಲಿ ನಗರದ ವೀರೇಶ್ವರ ಪುಣ್ಯಾಶ್ರಮ ಸಭಾಂಗಣದಲ್ಲಿ ಮಂಗಳವಾರ ರಕ್ತದಾನ ಶಿಬಿರ ಹಾಗೂ ಉಚಿತ ರಕ್ತಗುಂಪು ತಪಾಸಣಾ ಶಿಬಿರವನ್ನು ಆಯೋಜಿಸಲಾಯಿತು.

ಜಯಂತಿ ಪ್ರಯುಕ್ತ ಹಮ್ಮಿಕೊಂಡ ಈ ಶಿಬಿರದಲ್ಲಿ 30 ಜನರು ಸ್ವಯಂಪ್ರೇರಿತವಾಗಿ ರಕ್ತದಾನ ಮಾಡಿದರು. ಜೊತೆಗೆ 80ಕ್ಕೂ ಹೆಚ್ಚು ಜನರ ರಕ್ತಗುಂಪು ಪರೀಕ್ಷೆ ನಡೆಸಲಾಯಿತು.

ಗದಗ ರೆಡ್‌ಕ್ರಾಸ್ ಸಂಸ್ಥೆಯ ಸಭಾಪತಿ ಡಾ. ಆರ್.ಎನ್. ಗೋಡಬೋಲೆ ಅವರು ರಕ್ತದಾನದ ಮಹತ್ವವನ್ನು ವಿವರಿಸಿ, ಪ್ರತಿಯೊಬ್ಬ ಆರೋಗ್ಯವಂತ ವ್ಯಕ್ತಿಯೂ ವರ್ಷಕ್ಕೆ ಕನಿಷ್ಠ ಎರಡು ಬಾರಿ ರಕ್ತದಾನ ಮಾಡುವ ಮೂಲಕ ಆರೋಗ್ಯದ ಸಮತೋಲನ ಕಾಯ್ದುಕೊಳ್ಳಬಹುದು ಹಾಗೂ ಹೊಸ ರಕ್ತ ಉತ್ಪಾದನೆಗೆ ಸಹಕರಿಸಬಹುದು ಎಂದು ತಿಳಿಸಿದರು.

ಸಮತೋಲನ ಆಹಾರ ಪದ್ಧತಿಯನ್ನು ಅನುಸರಿಸುವುದು ಅಗತ್ಯವಿದ್ದು, ಊಟದಲ್ಲಿ ತರಕಾರಿ, ತೊಪ್ಪಲು ಪಲ್ಯ ಸೇರಿಸಬೇಕು. ನಿತ್ಯ ಲಘು ವಾಯುವಿಹಾರ, ಯೋಗ, ಧ್ಯಾನ ಹಾಗೂ ಲಘು ಸಂಗೀತ ಆಲಿಸುವುದರಿಂದ ಮಾನಸಿಕ ಒತ್ತಡ ನಿಯಂತ್ರಣ ▸▸3ನೇ ಪುಟಕ್ಕೆ

## ಶರಣಬಸವೇಶ್ವರ ಪುರಾಣ ಮಂಗಲೋತ್ಸವ ಮಾ. 8ಕ್ಕೆ

**■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ**

ಪಟ್ಟಣದ ಸಮೀಪದ ಖಾನಾಪೂರ ಗ್ರಾಮದಲ್ಲಿ ಶ್ರೀ ಬಸವೇಶ್ವರ ಶಿವಾನುಭವ ಮಂಟಪದಲ್ಲಿ ಮಹಾಮಹಿಮ ತ್ರಿವಿಧ ದಾಸೋಹ ಮೂರ್ತಿ ಕಲಬುರ್ಗಿ ಶ್ರೀ ಶರಣಬಸವೇಶ್ವರ ಪುರಾಣ ಪ್ರವಚನದ 50ನೇ ವರ್ಷದ ಮಹಾಮಂಗಲೋತ್ಸವ ಹಾಗೂ ಸಾಮೂಹಿಕ ವಿವಾಹಗಳು ಮಾ. 8ರಂದು ನಡೆಯಲಿವೆ ಎಂದು ಸುರೇಶ ಅಕ್ಕಿ ಹೇಳಿದರು.

ಅವರು ಮಂಗಳವಾರ ಶಿರಹಟ್ಟಿಯ ಪ್ರವಾಸಿ ಮಂದಿರದಲ್ಲಿ ಕಾರ್ಯಕ್ರಮದ ಆಮಂತ್ರಣ ಪತ್ರಿಕೆಗಳನ್ನು ಬಿಡುಗಡೆಗೊಳಿಸಿ ಮಾತನಾಡಿದರು.

ಕಳೆದ ಫೆ. 22ರಿಂದಲೇ ನಿತ್ಯವೂ ಸಂಜೆ 7 ಗಂಟೆಗೆ ನರಗುಂದದ ಪುಣ್ಯಾರಣ್ಯ ಪತ್ರಿವನಮಠದ ಡಾ. ಗುರು ಸಿದ್ಧವೀರ ಶಿವಯೋಗಿ ಶಿವಾಚಾರ್ಯ ಮಹಾಸ್ವಾಮಿಗಳಿಂದ ಪುರಾಣ ಪ್ರವಚನ ನಡೆಯುತ್ತಿದೆ. ಸುತ್ತಮುತ್ತಲಿನ ಅಪಾರ ಸಂಖ್ಯೆಯಲ್ಲಿ ಭಕ್ತರು ಕಾರ್ಯಕ್ರಮದಲ್ಲಿ ಭಾಗಿಯಾಗುತ್ತಿದ್ದಾರೆ. ನಿತ್ಯವೂ ಅನ್ನದಾಸೋಹವೂ ಕೂಡಾ ನಡೆಯುತ್ತಿದೆ.

ಪುರಾಣ ಪ್ರವಚನದ ಸುವರ್ಣ ಮಹೋತ್ಸವದ ಮಹಾಮಂಗಲೋತ್ಸವ ಕಾರ್ಯಕ್ರಮದ ಅಂಗವಾಗಿ ಮಾ. 8ರಂದು ಸಾಮೂಹಿಕ ವಿವಾಹ ಹಾಗೂ ಸಂಜೆ 7.30 ಗಂಟೆಗೆ ಮಹಾಮಂಗಲೋತ್ಸವ ನಡೆಯಲಿದೆ. ಇದರ ಸನ್ನಿದಾನವನ್ನು ಶಿರಹಟ್ಟಿಯ ಜ.ಫ. ಸಂಸ್ಥಾನಮಠದ 13ನೇ ಪೀಠಾಧಿಪತಿ ಜ.ಫ. ಸಿದ್ದರಾಮ ಸ್ವಾಮೀಜಿ, ಬನ್ನಿಕೊಪ್ಪದ ಡಾ. ಸುಜ್ಞಾನದೇವ ▸▸3ನೇ ಪುಟಕ್ಕೆ



## ಫೋನ್ ಕದ್ದಾಲಿಕೆ ಆರೋಪ ಹತಾಶ ಹೇಳಿಕೆ: ಸಿದ್ದರಾಮಯ್ಯ ತಿರುಗೇಟು

**■ವಿಜಯಸಾಕ್ಷಿ ಸುದ್ದಿ, ಬೆಂಗಳೂರು**

ಉಪಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ಅವರ ಮೇಲೆ ಕಣ್ಣಿಡಲು ಫೋನ್ ಕದ್ದಾಲಿಕೆ ನಡೆಯುತ್ತಿದೆ ಎಂಬ ವಿರೋಧ ಪಕ್ಷದ ಆರೋಪಗಳನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ತೀವ್ರವಾಗಿ ತಳ್ಳಿ ಹಾಕಿದ್ದಾರೆ.

ವಿರೋಧ ಪಕ್ಷದ ನಾಯಕರಾದ ಆರ್ ಅಶೋಕ್ ಹಾಗೂ ಕೇಂದ್ರ ಸಚಿವ ಎಚ್ ಡಿ ಕುಮಾರಸ್ವಾಮಿ ಅವರ ಹೇಳಿಕೆಗಳು ಹತಾಶ ಮನಸ್ಥಿತಿಯಿಂದ ಕೂಡಿವೆ ಎಂದು ಅವರು ಟೀಕಿಸಿದರು. ಮಾಧ್ಯಮಗಳಿಗೆ ಬಿಡುಗಡೆ ಮಾಡಿರುವ ಹೇಳಿಕೆಯಲ್ಲಿ, "ತಾ ಕಳ್ಳ ಇತರರ ನಂಬ ಎಂಬ ಗಾದೆಯಂತಿದೆ ಈ ಆರೋಪ ಎಂದು ಸಿದ್ದರಾಮಯ್ಯ ಹೇಳಿದ್ದಾರೆ.

ನಮ್ಮ ಪಕ್ಷ ಅಧಿಕಾರಕ್ಕೆ ಬಂದ ಬಳಿಕ ನನ್ನ ಮತ್ತು ಡಿ.ಕೆ.ಶಿವಕುಮಾರ್ ಅವರ ನಡುವಿನ ಸಂಬಂಧಕ್ಕೆ ಹುಳಿ ಹಿಂಡಲು ವಿರೋಧ ಪಕ್ಷಗಳು ನಿರಂತರ ಪ್ರಯತ್ನಿಸುತ್ತಿವೆ. ಆದರೆ ನಮ್ಮ ಹಾಲು-ಜೇನಿನಂತಹ ಸಂಬಂಧಕ್ಕೆ ಇದರಿಂದ ಯಾವ ಪರಿಣಾಮವೂ ಆಗುವುದಿಲ್ಲ," ಎಂದು ಸ್ಪಷ್ಟಪಡಿಸಿದರು.



ಆರೋಪ ಮಾಡಿರುವವರು ಹಿಂದಿನ ಮುಖ್ಯಮಂತ್ರಿಗಳಾಗಿದ್ದವರು ಮತ್ತು ಗೃಹ ಸಚಿವರಾಗಿ ಕಾರ್ಯನಿರ್ವಹಿಸಿದವರು ಎಂಬುದನ್ನು ಉಲ್ಲೇಖಿಸಿದ ಅವರು, "ಗುಪ್ತಚರ ವಿಭಾಗ ಅವರ ಕಾಲದಲ್ಲೂ ಮುಖ್ಯಮಂತ್ರಿಯವರ ಬಳಿಯೇ ಇತ್ತು. ತಮ್ಮ ಅನುಭವದ ಆಧಾರದ ಮೇಲೆ ಆರೋಪ ಮಾಡುತ್ತಿರುವಂತೆ ಕಾಣುತ್ತದೆ," ಎಂದು ವ್ಯಂಗ್ಯವಾಡಿದರು.

"ನಮ್ಮದು ಆಂತರಿಕ ಪ್ರಜಾಪ್ರಭುತ್ವ ಇರುವ ಪಕ್ಷ. ಕಾಂಗ್ರೆಸ್ ಪಕ್ಷವು ಪ್ರಧಾನಿ ಎದುರು ಮಾತಾಡಲು ಹೆದರುವ ಭಾರತೀಯ ಜನತಾ ಪಾರ್ಟಿ ಅಲ್ಲ, ಏಕ ಕುಟುಂಬದ ಅಧಿಪತ್ಯ ಇರುವ ಜನತಾದಳ (ಜಾತ್ಯಾತೀತ) ಕೂಡ ಅಲ್ಲ. ನಮ್ಮ ಶಾಸಕರು ಯಾರೂ ವ್ಯಕ್ತಿಗತ ಬೆಂಬಲಿಗರಲ್ಲ, ಎಲ್ಲರೂ ಪಕ್ಷದ ಬೆಂಬಲಿಗರು. ಹೈಕಮಾಂಡ್ ಆದೇಶವೇ ಅಂತಿಮ," ಎಂದು ಹೇಳಿದರು.

ವಿರೋಧ ಪಕ್ಷಗಳು ಸುಳ್ಳು ಸುದ್ದಿಗಳನ್ನು ಹರಡಿ ಭಿನ್ನಾಭಿಪ್ರಾಯ ಸೃಷ್ಟಿಸಲು ಯತ್ನಿಸುತ್ತಿವೆ ಎಂದು ಆರೋಪಿಸಿದ ಮುಖ್ಯಮಂತ್ರಿ, "ಶಿವಕುಮಾರ್ ಒಬ್ಬ ಕಟ್ಟಾ ಕಾಂಗ್ರೆಸಿಗ. ಸುಳ್ಳು ಪ್ರಕರಣಗಳ ಮೂಲಕ ಅವರನ್ನು ಮಣಿಸಲು ಬಿಜೆಪಿ ಮಾಡಿದ ಪ್ರಯತ್ನಗಳಿಗೂ ಅವರು ಜಗ್ಗಲಿಲ್ಲ," ಎಂದು ಹೇಳಿದರು. ರಾಜ್ಯದ ಇತ್ತೀಚಿನ ರಾಜಕೀಯ ಇತಿಹಾಸವನ್ನು ಉಲ್ಲೇಖಿಸಿದ ಅವರು, "ಫೋನ್ ಕದ್ದಾಲಿಕೆ, ಆಪರೇಷನ್ ಕಮಲ, ರೆಸಾರ್ಟ್ ರಾಜಕಾರಣಗಳಂತಹ ಘಟನೆಗಳು ಯಾವ ಪಕ್ಷದ ಆಡಳಿತದಲ್ಲಿ ನಡೆದವು ಎಂಬುದು ಜನತೆಗೆ ತಿಳಿದಿದೆ. ಪರಸ್ಪರ ಅಪನಂಬಿಕೆ ಮತ್ತು ಕುತಂತ್ರಗಳೇ ರಾಜ್ಯದಲ್ಲಿ ಅಸ್ಥಿರತೆಗೆ ಕಾರಣ," ಎಂದು ಹೇಳಿದರು. ವಿರೋಧ ಪಕ್ಷಗಳು ರಚನಾತ್ಮಕ ರಾಜಕಾರಣಕ್ಕೆ ಒತ್ತು ನೀಡಬೇಕು ಎಂದು ಸಲಹೆ ನೀಡಿದ ಮುಖ್ಯಮಂತ್ರಿ, "ರಾಜ್ಯದ ಜನತೆ ನಮಗೆ ಐದು ವರ್ಷಗಳ ಜನಾದೇಶ ನೀಡಿದ್ದಾರೆ. ಎಲ್ಲ ಕುತಂತ್ರಗಳ ನಡುವೆಯೂ ಈ ಅವಧಿಯನ್ನು ಕಾಂಗ್ರೆಸ್ ಸರ್ಕಾರ ಪೂರ್ಣಗೊಳಿಸಲಿದೆ," ಎಂದು ವಿಶ್ವಾಸ ವ್ಯಕ್ತಪಡಿಸಿದರು.

# ಹನೂರು ಕುಡಿಯುವ ನೀರಿಗಾಗಿ ಪಾದಯಾತ್ರೆ: ರೈತ ಸಂಘದಿಂದ ಸಿಎಂಗೆ ಮನವಿ



■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಕರ್ನಾಟಕ ರಾಜ್ಯ ರೈತ ಸಂಘದ ನೇತೃತ್ವದಲ್ಲಿ ರಾಜ್ಯದ ಚಾಮರಾಜನಗರ ಜಿಲ್ಲೆಯ ಹನೂರು ತಾಲೂಕನಿಂದ ಆರಂಭವಾದ ಪಾದಯಾತ್ರೆ ಹೋರಾಟ ಮಂಗಳವಾರ ಬೆಂಗಳೂರಿನಲ್ಲಿ ಸಮಾಪ್ತಿಗೊಂಡಿತು. ಹನೂರು ತಾಲೂಕಿನ ತೀವ್ರ ಕುಡಿಯುವ ನೀರಿನ ಸಮಸ್ಯೆಗೆ ಶಾಶ್ವತ ಪರಿಹಾರ ಕಲ್ಪಿಸುವಂತೆ ಆಗ್ರಹಿಸಿ ರೈತ ಸಂಘದ ಪದಾಧಿಕಾರಿಗಳು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಭೇಟಿಯಾಗಿ ಮನವಿ ಸಲ್ಲಿಸಿದರು.

ತಾಲೂಕಿನ ಗ್ರಾಮಗಳಲ್ಲಿ ಕುಡಿಯುವ ನೀರಿನ ತೀವ್ರ ಅಭಾವ ಉಂಟಾಗಿದ್ದು, ಜನರು ದೂರದೂರಿನಿಂದ ನೀರು ತರಬೇಕಾದ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ಮನವಿಯಲ್ಲಿ ವಿವರಿಸಲಾಗಿದೆ. ತುರ್ತು ಕ್ರಮವಾಗಿ ಹೆಚ್ಚುವರಿ ಟ್ಯಾಂಕರ್ ವ್ಯವಸ್ಥೆ, ಬೋರ್‌ವೆಲ್ ಮರುಜೀವನೀಕರಣ ಹಾಗೂ ಶಾಶ್ವತ ಜಲ ಯೋಜನೆ ಜಾರಿಗೆ ತರಬೇಕೆಂದು ಸಂಘ ಒತ್ತಾಯಿಸಿದೆ.

ಈ ಸಂದರ್ಭದಲ್ಲಿ ಶಾಸಕ ಬಿ.ಆರ್. ಪಾಟೀಲ್, ರೈತ ಸಂಘದ ರಾಜ್ಯಾಧ್ಯಕ್ಷ ಬಡಗಲಪುರ ನಾಗೇಂದ್ರ, ಗೌರವಾಧ್ಯಕ್ಷ ಚಾಮರಸ ಮಾಲಿ ಪಾಟೀಲ, ಪ್ರಧಾನ ಕಾರ್ಯದರ್ಶಿ ಎನ್.ಡಿ. ವಸಂತಕುಮಾರ್, ಮಹಿಳಾ ವಿಭಾಗದ ಕಾರ್ಯದರ್ಶಿಗಳಾದ ನೇತ್ರಾವತಿ ಹಾಗೂ ರಮ್ಯ ರಾಮಣ್ಣ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಮುಖ್ಯಮಂತ್ರಿ ಸಮಸ್ಯೆಯನ್ನು ಗಂಭೀರವಾಗಿ ಪರಿಗಣಿಸಿ ಸಂಬಂಧಿಸಿದ ಅಧಿಕಾರಿಗಳಿಗೆ ತಕ್ಷಣ ಕ್ರಮ ಕೈಗೊಳ್ಳುವಂತೆ ಸೂಚನೆ ನೀಡುವುದಾಗಿ ಭರವಸೆ ನೀಡಿದರು ಎಂದು ತಿಳಿದುಬಂದಿದೆ.

**ಹೋಳಿ ಹಬ್ಬದ ನಿಮಿತ್ತ ವಿಶೇಷ ಲೇಖನ**

# ರಂಗು ರಂಗಿನ ಸಂಭ್ರಮ ಹೋಳಿ ಹಬ್ಬ

ಯಾವುದೇ ಹಬ್ಬ ತನ್ನದೇ ಆದ ಆಚಾರ-ವಿಚಾರ, ಸಂಪ್ರದಾಯಗಳನ್ನು ಹೊಂದಿದೆ. ಅದೇ ರೀತಿ ಹೋಳಿ ಬಣ್ಣಗಳ ಹಬ್ಬವಾಗಿದ್ದು, ದೂರಾದವರು ತಮ್ಮ ತಾಯ್ನಾಡಿಗೆ ಬಂದು ಈ ಹಬ್ಬವನ್ನು ಆಚರಿಸುತ್ತಾರೆ. ಈ ಹಬ್ಬವನ್ನು ವಸಂತ ಮಾಸದಲ್ಲಿ ಆಚರಿಸುವುದಿಲ್ಲ. ಚಳಿಗಾಲದ ಕೊನೆಯನ್ನು ವಸಂತದ ಆಗಮನವನ್ನು ಸಾರುವ ಹಬ್ಬವಾಗಿದೆ. ಜನರು ಒಬ್ಬರಿಗೊಬ್ಬರು ಪರಸ್ಪರ ಬಣ್ಣಗಳನ್ನು ಎರಚಿಕೊಳ್ಳುವ ಮೂಲಕ ಈ ಹಬ್ಬವನ್ನು ಆಚರಿಸುತ್ತಾರೆ.

ಹೋಳಿ ಹಬ್ಬದ ದಿನದಂದು ಮಕ್ಕಳಿಂದ ದೊಡ್ಡವರ ತನಕ ಸಂಭ್ರಮ ಸಡಗರದಿಂದ ಆಚರಿಸುತ್ತಾರೆ. ಈ ಹಬ್ಬದ ಆಚರಣೆಯ ದಿನ ಕಾಮನ ಸುಂದರ ಪ್ರತಿಮೆ ಮಾಡಿ ಶೃಂಗರಿಸಿ ಆದಂತೆ ಕಾಮನ ಕಟ್ಟೆಯ ಮೇಲೆ ಚಪ್ಪರ ಕಟ್ಟಿ ಇಡುತ್ತಾರೆ. ಕಾಮನ ಮುಂದೆ ಮಂಗಳ ವಾದ್ಯಗಳನ್ನು ಊದುತ್ತಾರೆ. ಅದಲ್ಲದೆ ಪರಸ್ಪರ ಬೈಗುಳದೊಂದಿಗೆ ಬಣ್ಣದ ನೀರು, ಸಗಣಿಯ ಗಂಜಲಗಳನ್ನು ಎರಚುತ್ತಾರೆ.

ಪೂರ್ವದಲ್ಲಿ ತಾರಕಾಸುರನೆಂಬ ರಾಕ್ಷಸನಿದ್ದ. ಆತ ದುರಹಂಕಾರಿಯೂ, ಕ್ರೂರಿಯೂ ಆಗಿದ್ದ. ತಾರಕಾಸುರ ತನಗೆ ಸಾವು ಬರದಿರಲಿ ಎಂದು ತಪಸ್ಸು ಮಾಡಿ, ಬ್ರಹ್ಮ ಪ್ರತ್ಯಕ್ಷನಾಗುತ್ತಾನೆ. ಆಗ ನನಗೆ ಮರಣ ಬಾರದಿರಲಿ, ಬಂದರೂ ಅದು ಶಿವನಿಗೆ ಜನಿಸಿದ ಏಳು ದಿನದ ಶಿಶುವಿನಿಂದ ಬರಲಿ ಎಂಬ ವರವನ್ನು ಕೇಳಿದ್ದನು. ತಾರಕಾಸುರನ ತಪಸ್ಸನ್ನು ಮೆಚ್ಚಿ ಬ್ರಹ್ಮ ವರವನ್ನು ಕೊಡುತ್ತಾನೆ. ಆಗ ತನಗೆ ವರ ಸಿಕ್ಕಿದೆ ಎಂದು ತಾರಕಾಸುರ ಮೆರೆಯುತ್ತಿರುತ್ತಾನೆ.



ಇತ್ತ ಭೋಗ ಸಮಾಧಿಯಲ್ಲಿದ್ದ ಶಿವ, ಪಾರ್ವತಿಯ ಜೊತೆ ಸಮಾಗಮ ಹೊಂದಲು ಸಾಧ್ಯವಿರಲಿಲ್ಲ. ಆಗ ದೇವತೆಗಳು ಪಾರ್ವತಿಯಲ್ಲಿ ಮೋಹ ಹೊಂದುವಂತೆ ಮಾಡಲು ಕಾಮನಲ್ಲಿ ಬೇಡಿದರು. ಕಾಮ (ಮನ್ಮಥ) ಮತ್ತು ಅವನ ಪತ್ನಿ ರತಿದೇವಿ ಈ ಸತ್ಕಾರ್ಯಕ್ಕೆ ಒಪ್ಪಿದ್ದರು.

ಈ ವೇಳೆ ಭೋಗಸಮಾಧಿಯಲ್ಲಿದ್ದ ಶಿವನಿಗೆ ಹೂ ಬಾಣಗಳಿಂದ ಹೊಡೆದು ಸಮಾಧಿಯಿಂದ ಎಚ್ಚರಿಸಿದರು. ಇದರಿಂದ ಕುಪಿತಗೊಂಡ ಶಿವನು ತನ್ನ ಮೂರನೇ ಕಣ್ಣಿಂದ ಕಾಮನನ್ನು ಸುಟ್ಟು ಭಸ್ಮ ಮಾಡಿದನು. ರತಿದೇವಿ ದುಃಖದಿಂದ ಶಿವನಲ್ಲಿ ಪತಿಭಿಕ್ಷೆಯನ್ನು ಬೇಡಿದಳು. ಶಾಂತಗೊಂಡ ಶಿವನು ಪತ್ನಿಯೊಡನೆ ಮಾತ್ರ ಶರೀರಿಯಾಗುವಂತೆ ಕಾಮನಿಗೆ ವರ ಕೊಟ್ಟನು. ಲೋಕಕಲ್ಯಾಣಕ್ಕಾಗಿ ಮನ್ಮಥನು ಅನಂಗನಾದ. ಈ ಘಟನೆ ನಡೆದದ್ದು ಫಾಲ್ಗುಣ ಶುದ್ಧ ಪೂರ್ಣಿಮೆಯಂದು. ಆದ್ದರಿಂದ ಈ ದಿನವನ್ನು ಕಾಮನ ಹುಣ್ಣಿಮೆಯಾಗಿ ಆಚರಿಸಲ್ಪಡುತ್ತದೆ.

ಹೋಳಿ ಹಬ್ಬವು ಭಾರತೀಯ ಸಂಸ್ಕೃತಿಯಲ್ಲಿ ಆಳವಾಗಿ ಬೇರೂರಿರುವ ಒಂದು ಪ್ರಾಚೀನ ಹಬ್ಬವಾಗಿದ್ದು, ಪೌರಾಣಿಕ ಕಥೆಗಳು ಮತ್ತು ಸಾಂಕೇತಿಕ ಸಂಪ್ರದಾಯಗಳ ಮಿಶ್ರಣದಿಂದ ಇದರ ಮೂಲವನ್ನು ಪಡೆಯಲಾಗಿದೆ. ಈ ದಂತಕಥೆಗಳಲ್ಲಿ, ಪ್ರಹ್ಲಾದ ಮತ್ತು ಹೋಳಿಕಾ ಅವರ ಕಥೆಯು ಎದ್ದು ಕಾಣುತ್ತದೆ, ಇದು ದುಷ್ಟತನದ ಮೇಲೆ ಧರ್ಮದ ವಿಜಯವನ್ನು ಸಂಕೇತಿಸುತ್ತದೆ.

ಹಿಂದೂ ಪುರಾಣದ ಪ್ರಕಾರ, ಭಕ್ತ ಯುವರಾಜ ಕುಮಾರ ಪ್ರಹ್ಲಾದನು ತನ್ನ ದಬ್ಬಾಳಿಕೆ ನಡೆಸುವ ತಂದೆ ರಾಜ ಹಿರಣ್ಯಕಶಿಪುವನ್ನು ಧಿಕ್ಕರಿಸಿದನು, ಏಕೆಂದರೆ ಅವನು ವಿಷ್ಣುವಿನ ಮೇಲಿನ ತನ್ನ ಭಕ್ತಿಯನ್ನು ನಿಗ್ರಹಿಸಲು ಪ್ರಯತ್ನಿಸಿದನು. ಪ್ರಹ್ಲಾದನ ನಂಬಿಕೆಯಿಂದ ಕೋಪಗೊಂಡ ರಾಜನು ತನ್ನ ಸಹೋದರಿ ಹೋಳಿಕಾಳೊಂದಿಗೆ ಪಿತೂರಿ ನಡೆಸಿದನು, ಆಕೆಗೆ ಅಗ್ನಿಯಿಂದ ರಕ್ಷಣೆ ನೀಡುವ ವರವಿತ್ತು. ಇಬ್ಬರೂ ಒಟ್ಟಾಗಿ ಪ್ರಹ್ಲಾದನನ್ನು ಜೀವಂತವಾಗಿ ಸುಡಲು ಸಂಚು ರೂಪಿಸಿದರು.

ದೈವಿಕ ಹಸ್ತಕ್ಷೇಪದಿಂದ ಹೋಳಿಕಾ ಬೆಂಕಿಯಲ್ಲಿ ಸುಟ್ಟುಹೋದಳು, ಆದರೆ ಪ್ರಹ್ಲಾದನು ತನ್ನ ದೃಢ ಭಕ್ತಿಯಿಂದ ರಕ್ಷಿಸಲ್ಪಟ್ಟು ಯಾವುದೇ ಹಾನಿಗೊಳಗಾಗದೆ ಹೊರಬಂದಳು. ದೈವಿಕ ಹಸ್ತಕ್ಷೇಪದ ಈ ಕಥೆ ಮತ್ತು ಕೆಟ್ಟದ್ದರ ಮೇಲೆ ಒಳ್ಳೆಯದರ ಅಂತಿಮ ವಿಜಯವು ಹೋಳಿಯ ಮಹತ್ವದ ಮೂಲಾಧಾರವಾಗಿದೆ.

ಹೋಳಿಯ ಬಣ್ಣಗಳು ಆಳವಾದ ಸಾಂಕೇತಿಕ ಮಹತ್ವವನ್ನು ಹೊಂದಿವೆ. ಪ್ರಕೃತಿಯ ಚಕ್ರೀಯ ಲಯಗಳನ್ನು ಮತ್ತು ಬೆಳಕು ಮತ್ತು ಕತ್ತಲೆಯ ನಡುವಿನ ಶಾಶ್ವತ ಹೋರಾಟವನ್ನು ಪ್ರತಿಬಿಂಬಿಸುತ್ತವೆ. ಚಳಿಗಾಲವು ವಸಂತಕಾಲಕ್ಕೆ ದಾರಿ ಮಾಡಿಕೊಡುತ್ತಿದ್ದಂತೆ, ಹೋಳಿಯ ರೋಮಾಂಚಕ ವರ್ಣಗಳು ಜೀವನದ ನವೀಕರಣ ಮತ್ತು ಪ್ರಕೃತಿಯು ತನ್ನ ನಿದ್ರೆಯಿಂದ ಜಾಗೃತಗೊಳ್ಳುವುದನ್ನು ತಿಳಿಸುತ್ತವೆ. ಪ್ರಹ್ಲಾದ್ ಮತ್ತು ಹೋಳಿಕಾ ಅವರ ಕಥೆಯಲ್ಲಿ ಚಿತ್ರಿಸಿದಂತೆ ಅವು ಕೆಟ್ಟದ್ದರ ಮೇಲೆ ಒಳ್ಳೆಯತನದ ವಿಜಯವನ್ನು ಪ್ರತಿನಿಧಿಸುತ್ತವೆ. ಅಲ್ಲಿ ನೀತಿಯ ಶಕ್ತಿಗಳು ದಬ್ಬಾಳಿಕೆ ಮತ್ತು ದಬ್ಬಾಳಿಕೆಯ ವಿರುದ್ಧ ವಿಜಯಶಾಲಿಯಾಗಿ ಹೊರಹೊಮ್ಮುತ್ತವೆ.

ಹಿರಣ್ಯಕಶಿಪುವಿನ ಸಹೋದರಿ ಹೋಲಿಕಾವಿಷ್ಣು ಭಕ್ತ ಪ್ರಹ್ಲಾದನನ್ನು ಬೆಂಕಿಯಲ್ಲಿ ಸುಡಲು ಹೋಗಿ ತಾನೇ ಸುಟ್ಟು ಹೋದ ಕಥೆಯುಧರ್ಮವು ಅಧರ್ಮದ ಮೇಲೆ ಗೆಲ್ಲುತ್ತದೆ ಎಂಬ ಸಂದೇಶವನ್ನು ನೀಡುತ್ತದೆ. ಜಾತಿಮತಬಡವ-ಶ್ರೀಮಂತ ಭೇದವಿಲ್ಲದೆ ಎಲ್ಲರೂ ಒಂದಾಗಿ ಬಣ್ಣದಾಟ ಆಡುವುದರಿಂದ ಸಾಮಾಜಿಕ ಸಾಮರಸ್ಯ ಮೂಡುತ್ತದೆ. ಚಳಿಗಾಲ ಮುಗಿದು ವಸಂತಕಾಲದ ಆಗಮನವನ್ನು ಸ್ವಾಗತಿಸುವ ಸಂಕೇತವಾಗಿ ಪ್ರಕೃತಿಯಲ್ಲಿನ ಬದಲಾವಣೆಯನ್ನು ಸಂಭ್ರಮಿಸಲಾಗುತ್ತದೆ.

ಹೋಲಿಕಾ ದಹನವು ಮನುಷ್ಯನ ಮನಸ್ಸಿನಲ್ಲಿರುವ ದುರ್ಗುಣಗಳನ್ನು ದಹಿಸಿ ಹೊಸ ಜೀವನವನ್ನು ಆರಂಭಿಸುವ ಸಂಕೇತವಾಗಿದೆ. ಬಣ್ಣಗಳನ್ನು ಎರಚಿಕೊಳ್ಳುವುದರ ಮೂಲಕ ಹಳೆಯ ವ್ಯಕ್ತಿಗಳು ತಮ್ಮ ಮನಸ್ತಾಪಗಳನ್ನು ಮರೆತು ಸಂಬಂಧಗಳನ್ನು ಗಟ್ಟಿಗೊಳಿಸುತ್ತದೆ.

ಈ ಹಬ್ಬ ಮನೆಯ ಪ್ರತಿಯೊಬ್ಬರನ್ನು ಒಂದುಗೂಡಿಸುತ್ತದೆ ಮತ್ತು ಹಬ್ಬದ ಸಡಗರವನ್ನು ಪ್ರತಿಯೊಬ್ಬರಲ್ಲಿ ತುಂಬುತ್ತದೆ. ಕೆಟ್ಟದ್ದು ಒಳ್ಳೆಯದರ ಮುಂದೆ ತಲೆಬಾಗಬೇಕು ಎಂಬ ಸಂದೇಶವನ್ನು ಹೋಳಿ ಹಬ್ಬ ಸಾರುತ್ತದೆ. ದುಷ್ಕೃತ್ಯಗಳು ದೇವರ ಶಕ್ತಿಯ ಎದುರು ಈ ಜಯವನ್ನು ಪಡೆಯಲು ಸಾಧ್ಯವಿಲ್ಲ ಎಂಬ ಸಾರ ಹಬ್ಬದ ಹಿಂದಿದೆ. ಹೋಲಿಕನಂತೆ ಕೆಟ್ಟ ಶಕ್ತಿಗಳು, ದುಷ್ಟ ಆಲೋಚನೆಗಳು ನಾಶವಾಗಿ ಹೊಸದರ ಪ್ರಾರಂಭದ ಕಡೆಗೆ ಮನುಷ್ಯರು ಹೋಗಬೇಕು, ರಾಸಯನಿಕ ಮುಕ್ತವಾದ ಪರಿಸರ ಸ್ನೇಹಿ ಬಣ್ಣಗಳನ್ನು ಬಳೆದು, ನಮ್ಮ ಹಾಗೂ ಪ್ರಕೃತಿಯ ಆರೋಗ್ಯವನ್ನು ಕಾಪಾಡುತ್ತಾ ಈ ಬಾರಿ ಹೋಳಿ ಹಬ್ಬವನ್ನು ಸಂಭ್ರಮ ಸಡಗರದಿಂದ ಆಚರಿಸೋಣ.

**– ಯುವರಾಜ ಸಿ.ಎಲಿಗಾರ.**
ಪ್ರಶಿಕ್ಷಣಾರ್ಥಿ,
ವಾರ್ತಾ ಮತ್ತು ಸಾ.ಸಂ.ಇ
ಗದಗ.

**ಪತ್ರಿಕಾಗೋಷ್ಠಿಯಲ್ಲಿ ಅರಿವು ಕೇಂದ್ರದ ಗದಗ ಜಿಲ್ಲಾ ಘಟಕದ ಅಧ್ಯಕ್ಷ ಗವಿಸಿದ್ದಪ್ಪ ಎಚ್.ಹಳ್ಳಾಕರ**

# ಗ್ರಂಥಾಲಯ ಮೇಲ್ವಿಚಾರಕರಿಂದ ರಾಜ್ಯ ಮಟ್ಟದ ಹೋರಾಟ



■ ವಿಜಯಸಾಕ್ಷಿ ಸುದ್ದಿ, ಡಂಬಳ

ಹಲವು ದಶಕದ ಹೋರಾಟದ ಫಲದಿಂದ ಗ್ರಂಥಾಲಯ ಮೇಲ್ವಿಚಾರಕರಾಗಿ ಸೇವೆ ಸಲ್ಲಿಸುತ್ತಿರುವ ಸಿಬ್ಬಂದಿಗಳಿಗೆ ಸರ್ಕಾರ 2023ರಲ್ಲಿ ಕನಿಷ್ಠ ವೇತನ ನೀಡುವ ಕುರಿತು ಆದೇಶ ಮಾಡಿದ್ದರು. ಅದು ಇಂದಿಗೂ ಜಾರಿಗೆಯಾಗದಿರುವದನ್ನು ಖಂಡಿಸಿ ಸರ್ಕಾರದ ವಿರುದ್ಧ ಶೀಘ್ರದಲ್ಲೇ ರಾಜ್ಯ ಮಟ್ಟದ ಹೋರಾಟ ಮಾಡಲಾಗುವುದು ಎಂದು ಅರಿವು ಕೇಂದ್ರದ ಗದಗ ಜಿಲ್ಲಾ ಘಟಕದ ಅಧ್ಯಕ್ಷ ಗವಿಸಿದ್ದಪ್ಪ ಎಚ್.ಹಳ್ಳಾಕರ ಹೇಳಿದರು.

ಡಂಬಳ ಗ್ರಾಮದ ಗ್ರಂಥಾಲಯದಲ್ಲಿ ಸರ್ಕಾರ ಕನಿಷ್ಠ ವೇತನದ ಆದೇಶ ಪಾಲನೆ ಮಾಡಲು ವಿಳಂಬ ಮಾಡುತ್ತಿರುವ ಸರ್ಕಾರದ ನಡೆ ಖಂಡಿಸಿ ಹಾಗೂ ವಿವಿಧ ಬೇಡಿಕೆಯ ಕುರಿತು ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದರು.

ನಮ್ಮ ಜಿಲ್ಲೆಯಲ್ಲಿ 124 ಗ್ರಂಥಾಲಯ ಮೇಲ್ವಿಚಾರಕರಿದ್ದಾರೆ. ಸಿಬ್ಬಂದಿ ವೇತನವಿಲ್ಲದೆ ಪರದಾಡುವ ಪರಿಸ್ಥಿತಿ ನಿರ್ಮಾಣವಾಗಿದೆ. ಮಕ್ಕಳ ಶಾಲಾ ಕಾಲೇಜು, ಕುಟುಂಬ ನಿರ್ವಾಹಣೆ ಸೇರಿದಂತೆ ಇತರೆ ಖರ್ಚುವೆಚ್ಚ ಮತ್ತು ನಿತ್ಯದ ಅಗತ್ಯಗಳನ್ನು ಪೂರೈಸಿಕೊಳ್ಳಲು ಸಾಲ ಸೋಲ ಮಾಡುವ ಪರಿಸ್ಥಿತಿ ಇದೆ. ಸರ್ಕಾರ ಕನಿಷ್ಠ ವೇತನ 12000ರೂ ಹಾಗೂ ಗ್ರಾಮ ಪಂಚಾಯಿತಿ ಸೆಸ್ ಮೂಲಕ 7200 ರೂ ಭರಿಸುವಂತೆ ಸೂಚಿಸಿದೆ. ಸಂಬಳವು 3-4 ತಿಂಗಳಿಗೊಮ್ಮೆ ಪಾವತಿಯಾಗುತ್ತಿದೆ. ಸರ್ಕಾರ ಕನಿಷ್ಠ ವೇತನ ಜಾರಿ ಮಾಡದೆ ಕಾಗದದಲ್ಲೇ ಉಳಿದಿರುವುದು ಬೇಸರದ ಸಂಗತಿ ಎಂದು ಬೇಸರ ವ್ಯಕ್ತಪಡಿಸಿದರು.

ಸಂಘದ ಜಿಲ್ಲಾ ಘಟಕದ ಉಪಾಧ್ಯಕ್ಷ ವೀರೇಶ ತಮ್ಮನಗೌಡ್ರ ಮಾತನಾಡಿ, ಪಂಚಾಯಿತಿ ವ್ಯಾಪ್ತಿಯ ವಿದ್ಯಾರ್ಥಿಗಳು, ಸಾರ್ವಜನಿಕರಲ್ಲಿ ಓದಿನ ಬಗ್ಗೆ ಅರಿವು ಮೂಡಿಸುವುದು, ಗ್ರಂಥಾಲಯ ನಿರ್ಹಾವಣೆ ಸೇರಿದಂತೆ ಇತರೆ ಕಾರ್ಯಚಟುವಟಿಕೆಯನ್ನು ಮಾಡುತ್ತೇವೆ. ಹೆಸರಿಗೆ ಮಾತ್ರ ಕನಿಷ್ಠ ವೇತನ ಜಾರಿಗೆಯಾಗಿದೆ.

> ರಾಜ್ಯದಲ್ಲಿ ಸಕಾಲಕ್ಕೆ ಮತ್ತು ಕನಿಷ್ಠ ವೇತನ ಕಾಯ್ದಿ ಜಾರಿಗೆ ಆಗದೆ ಇದ್ದ ಪಕ್ಷದಲ್ಲಿ ರಾಜ್ಯದ ಇಬ್ಬರು ಗ್ರಂಥಪಾಲಕರು ಮನನೊಂದು ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಆದರೂ ಸಹ ಸರ್ಕಾರ ಎಚ್ಚೆತ್ತುಕೊಂಡಿಲ್ಲ.
>
> ನಮ್ಮನ್ನು ಸರ್ಕಾರವೇ ಶೋಷಣೆಗೆ ಒಳಪಡಿಸಿದೆ. ಈಗಾಗಲೆ ನಿವೃತ್ತಿ ಹೊಂದಿದ್ದ ಮತ್ತು ಹೊಂದುತ್ತಿರುವ ಗ್ರಂಥಾಲಯ ಮೇಲ್ವಿಚಾರಕರಿಗೆ 10 ಲಕ್ಷ ರೂ ನೀಡುಗಂಟು ಪರಿಹಾರ ನೀಡಬೇಕು. 10ರಿಂದ 15 ವರ್ಷ ಸೇವೆ ಸಲ್ಲಿಸಿದ ಮೇಲ್ವಿಚಾರಕರನ್ನು ಖಾಯಂಗೊಳಿಸಬೇಕು ಎಂದು ವೀರೇಶ ತಮ್ಮನಗೌಡ್ರ ಒತ್ತಾಯಿಸಿದರು.

ಇದುವರೆಗೂ ಪೂರ್ಣ ಸಂಬಳ ಪಡೆದಿಲ್ಲ. ಸರ್ಕಾರಕ್ಕೆ ಪತ್ರ ಬರೆದಿದ್ದೇವೆ. ಮನವಿ ಸಲ್ಲಿಸಿದ್ದೇವೆ. ವಿವಿಧ ರೀತಿಯ ಹೋರಾಟ ಮಾಡಿದರೂ ಪ್ರಯೋಜನವಾಗಿಲ್ಲ ಎಂದರು.

ಪಿಎಫ್, ಇಎಸ್ಐ, ಗಳಿಕೆ ರಜೆ ಸೇರಿದಂತೆ ಇತರೆ ಬೇಡಿಕೆ ಈಡೇರಿಸಬೇಕು. ನ್ಯಾಯಯುತ ಬೇಡಿಕೆಯನ್ನು ಸರ್ಕಾರ ಗಂಭೀರವಾಗಿ ಪರಿಗಣಿಸದೆ ಹೋದರೆ ನಮ್ಮ ಇಲಾಖೆಯನ್ನು ಮಾತ್ರ ಇಲಾಖೆಯಾದ ಸಾರ್ವಜನಿಕ ಗ್ರಂಥಾಲಯ ಇಲಾಖೆಗೆ ವರ್ಗಾವಣೆ ಮಾಡಬೇಕೆಂದು ಸರ್ಕಾರಕ್ಕೆ ಒತ್ತಾಯ ಮಾಡಿದರು.

ಈ ಸಂದರ್ಭದಲ್ಲಿ ಗದಗ ತಾಲೂಕು ಘಟಕದ ಅಧ್ಯಕ್ಷ ಚನ್ನಯ್ಯ ಪ್ರಭಯ್ಯನಮಠ, ಜಿಲ್ಲಾ ಖಜಾಂಚಿ ಭಗವಂತ ತಾರಿಕೊಪ್ಪ, ಮುಂಡರಗಿ ಘಟಕದ ಅಧ್ಯಕ್ಷ ಪ್ರೇಮಸಿಂಗ್ ಪವಾರ, ಕಾರ್ಯದರ್ಶಿ ಅಂದಪ್ಪ ತುರಕಾಣಿ, ಜಿಲ್ಲಾ ಸಂಚಾಲಕ ಹಾಲಪ್ಪ ಕೊರ್ಲಹಳ್ಳಿ, ರಾಘವೇಂದ್ರ ತಳವಾರ, ಬಸವರಾಜ ಬೋಮ್ಮನಪಾಡ ಇತರರು ಇದ್ದರು.

**ಶಾಲಾ ವಾತಾವರಣಕ್ಕೆ ಧಕ್ಕೆ ಆರೋಪ; ತನಿಖೆಗೆ ಆಗ್ರಹ**

# ಸರ್ಕಾರಿ ಶಾಲೆಯ ಪ್ರಭಾರಿ ಮುಖ್ಯಗುರು ವಿರುದ್ಧ ಗ್ರಾಮಸ್ಥರ ದೂರು

■ ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ

ತಾಲೂಕಿನ ಹಂಪಾಪಟ್ಟಣ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಪ್ರಭಾರಿ ಮುಖ್ಯಗುರು ಜೆ. ಉಮೇಶ್ ಅವರ ವಿರುದ್ಧ ಗ್ರಾಮಸ್ಥರು ಗಂಭೀರ ಆರೋಪಗಳನ್ನು ಮಾಡಿದ್ದು, ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಮನವಿ ಸಲ್ಲಿಸಿದ್ದಾರೆ.

ಗ್ರಾಮಸ್ಥರ ಆರೋಪದ ಪ್ರಕಾರ, ಪ್ರಭಾರಿ ಮುಖ್ಯಗುರು ಶಾಲೆಗೆ ಕರ್ತವ್ಯಕ್ಕೆ ಹಾಜರಾದ ದಿನದಿಂದಲೇ ಇತರ ಶಿಕ್ಷಕರು ಹಾಗೂ ಗ್ರಾಮದ ಹಿರಿಯರೊಂದಿಗೆ ಅಸಭ್ಯವಾಗಿ ವರ್ತಿಸುತ್ತಿದ್ದಾರೆ. ಅಲ್ಲದೆ, ವಿದ್ಯಾರ್ಥಿಗಳಿಗೆ ಬಾಳೆಹಣ್ಣು ಹಾಗೂ ಹಣದ ಆಮಿಷ ತೆ-ೋರಿಸಿ, ಕೆಲವೊಮ್ಮೆ ಬೆದರಿಕೆ ಹಾಕಿ ಶಾಲೆಯ ಶೌಚಾಲಯಗಳನ್ನು ತೊಳೆಯಿಸುವಂತೆ ಮಾಡಲಾಗಿದೆ ಎಂದು ಆರೋಪಿಸಲಾಗಿದೆ.

ಈ ಕುರಿತು ಗ್ರಾಮಸ್ಥರು ಪ್ರಶ್ನಿಸಿದಾಗ, "ನಾನು ಈ ಶಾಲೆಯ ಪ್ರಭಾರಿ ಮುಖ್ಯಗುರು, ನನ್ನ ಇಷ್ಟದಂತೆ ಮಾಡುತ್ತೇನೆ" ಎಂದು ಅವಾಚ್ಯವಾಗಿ ಮಾತನಾಡಿರುವುದಾಗಿ ಗ್ರಾಮಸ್ಥರು ದೂರಿನಲ್ಲಿ ತಿಳಿಸಿದ್ದಾರೆ.



ಘಟನೆಯ ಹಿನ್ನೆಲೆಯಲ್ಲಿ ಗ್ರಾಮದಲ್ಲಿ ಅಶಾಂತಿ ವಾತಾವರಣ ನಿರ್ಮಾಣವಾಗಿದ್ದು, ವಿದ್ಯಾರ್ಥಿಗಳಲ್ಲಿ ಓದಿನ ಆಸಕ್ತಿ ಕುಂಠಿತವಾಗುತ್ತಿದೆ ಎಂಬ ಆತಂಕ ವ್ಯಕ್ತವಾಗಿದೆ.

ಈ ಸಂದರ್ಭದಲ್ಲಿ ಮಾತನಾಡಿದ ಬಿ. ಶಿವಪ್ಪ, "ಶಾಲೆ ಎಂಬುದು ಮಕ್ಕಳಿಗೆ ಶಿಕ್ಷಣ ನೀಡುವ ಪವಿತ್ರ ಸ್ಥಳ. ವಿದ್ಯಾರ್ಥಿಗಳಿಂದ ಶೌಚಾಲಯಗಳನ್ನು ತೊಳೆಸುವುದು ತಪ್ಪು ಕ್ರಮ. ಇದರಿಂದ ಮಕ್ಕಳ ಮನೋಭಾವ ಮತ್ತು ವಿದ್ಯಾಭ್ಯಾಸದ ಮೇಲೆ ಕೆಟ್ಟ ಪರಿಣಾಮ ಬೀಳುತ್ತದೆ" ಎಂದು ಹೇಳಿದರು.

ಶೀಗೆನಹಳ್ಳಿ ಬಸವರಾಜ ಅವರು, "ಗ್ರಾಮಸ್ಥರು ಪ್ರಶ್ನಿಸಿದಾಗ ಮುಖ್ಯಗುರು ಅವಾಚ್ಯವಾಗಿ ಮಾತನಾಡಿರುವುದು ವಿಷಾದನೀಯ. ಶಿಕ್ಷಕರಿಗೆ ಇಂತಹ ವರ್ತನೆ ಯೋಗ್ಯವಲ್ಲ" ಎಂದು ಆಕ್ರೋಶ ವ್ಯಕ್ತಪಡಿಸಿದರು.

ಟಿ. ಮಹೇಂದ್ರ ಮಾತನಾಡಿ, "ಈ ಘಟನೆಗಳಿಂದ ವಿದ್ಯಾರ್ಥಿಗಳಲ್ಲಿ ಓದಿನ ಆಸಕ್ತಿ ಕುಸಿಯುತ್ತಿದೆ. ಸಂಬಂಧಪಟ್ಟ ಅಧಿಕಾರಿಗಳು ತಕ್ಷಣ ತನಿಖೆ ನಡೆಸಿ ಸೂಕ್ತ ಕ್ರಮ ಕೈಗೊಳ್ಳಬೇಕು" ಎಂದು ಒತ್ತಾಯಿಸಿದರು. ಗ್ರಾಮಸ್ಥರು ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಸಲ್ಲಿಸಿದ ಮನವಿಯಲ್ಲಿ, ಪ್ರಭಾರಿ ಮುಖ್ಯಗುರು ವಿರುದ್ಧ ಶಿಸ್ತಿನ ಕ್ರಮ ಕೈಗೊಂಡು ಅಗತ್ಯವಿದ್ದಲ್ಲಿ ಅಮಾನತು ಮಾಡುವಂತೆ ಆಗ್ರಹಿಸಿದ್ದಾರೆ.

ಈ ಸಂದರ್ಭದಲ್ಲಿ ಎಂ.ಕೆ. ಕೊಟ್ರೇಶ್, ತಳವಾರ ಸೋಮನಾಥ, ಹಂಪಿನಕಟ್ಟಿ ಪ್ರವೀಣ್, ರಾಘವೇಂದ್ರ ತಳವಾರ್, ಎಸ್. ನಾಗರಾಜ, ಮಾರುತಿ ಉಪ್ಪಾರ್, ಟಿ. ಗೌತಮ್ ಹಾಗೂ ಸಿ. ಸುಭಾಸು ಉಪಸ್ಥಿತರಿದ್ದರು.

**ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್ ವತಿಯಿಂದ 'Whistle Blower Policy' ಜಾರಿ**

# ಭ್ರಷ್ಟಾಚಾರ, ವಂಚನೆ ವಿರುದ್ಧ ದೂರು ನೀಡಲು ಮುಕ್ತ ಅವಕಾಶ

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್ ವತಿಯಿಂದ ಆಯುಷ್ಮಾನ್ ಭಾರತ್ ಪ್ರಧಾನಮಂತ್ರಿ ಜನಾರೋಗ್ಯ ಯೋಜನೆ-ಮುಖ್ಯಮಂತ್ರಿ ಆರೋಗ್ಯ ಕರ್ನಾಟಕ (AB-PM-JAY-CMs-ArK) ಯೋಜನೆಯ ಅನುಷ್ಠಾನದಲ್ಲಿ ಪಾರದರ್ಶಕತೆ ಮತ್ತು ಜವಾಬ್ದಾರಿತ್ವ ಹೆಚ್ಚಿಸುವ ಉದ್ದೇಶದಿಂದ 'Whistle Blower Policy' ಜಾರಿಗೆ ತರಲಾಗಿದೆ.

ಯೋಜನೆಯಡಿ ಸರ್ಕಾರಿ ಅಥವಾ ಖಾಸಗಿ ಆಸ್ಪತ್ರೆಗಳು ಹಾಗೂ ಅನುಷ್ಠಾನದಲ್ಲಿ ಭಾಗಿಯಾಗಿರುವ ಯಾವುದೇ ಪಾಲುದಾರರ ವಿರುದ್ಧ ಭ್ರಷ್ಟಾಚಾರ, ವೈದ್ಯಕೀಯ ಅಥವಾ ವೈದ್ಯಕೀಯೇತರ ವಂಚನೆ, ಉದ್ದೇಶಪೂರ್ವಕ ಅಧಿಕಾರ ದುರುಪಯೋಗದಂತಹ ಆರೋಪಗಳು ಕಂಡುಬಂದಲ್ಲಿ, ಆ ಕುರಿತು ದೂರು/ಮಾಹಿತಿ ನೀಡುವ ವ್ಯಕ್ತಿಯ ಗುರುತನ್ನು ಸಂಪೂರ್ಣ ಗೌಪ್ಯವಾಗಿಟ್ಟುಕೊಂಡು ವಿಚಾರಣೆ ನಡೆಸಲು ಈ ನೀತಿ ಅನುಕೂಲ ಮಾಡಿಕೊಡುತ್ತದೆ.

ಈ ನೀತಿಯ ಮುಖ್ಯ ಉದ್ದೇಶವು ದೂರುಗಳನ್ನು ಸುರಕ್ಷಿತವಾಗಿ ಸ್ವೀಕರಿಸಿ, ದೂರುದಾರರ ಗೌಪ್ಯತೆಯನ್ನು ಕಾಪಾಡಿ, ಬಹಿರಂಗಪಡಿಸುವಿಕೆಯ ವಿರುದ್ಧ ಸಮರ್ಪಕ ರಕ್ಷಣೆಯನ್ನು ಒದಗಿಸುವುದಾಗಿದೆ. ಗುರುತರ ಆರೋಪಗಳ ಬಗ್ಗೆ ವಿವರವಾದ ತನಿಖೆ ನಡೆಸಿ ಪ್ರಾಥಮಿಕ ವರದಿ ಸಲ್ಲಿಸಲು ನಾಮನಿರ್ದೇಶಿತ ಅಧಿಕಾರಿಯನ್ನು 'Whistle Blower Officer' ಎಂದು ಕರೆಯಲಾಗುತ್ತದೆ. ಅದರಂತೆ, ಟ್ರಸ್ಟ್‌ನ ಮುಖ್ಯ ಜಾಗೃತಾಧಿಕಾರಿಗಳು 'Whistle Blower Officer' ಆಗಿ ಕಾರ್ಯನಿರ್ವಹಿಸಲಿದ್ದಾರೆ.

'Whistle Blower Committee' ಯು ಅಧಿಕಾರಿಯಿಂದ ಸಲ್ಲಿಸಲಾದ ತನಿಖಾ ವರದಿಯನ್ನು ಪರಿಶೀಲಿಸಿ, ಅಗತ್ಯವಿದ್ದಲ್ಲಿ ಸಕ್ಷಮ ಪ್ರಾಧಿಕಾರದ ಅನುಮೋದನೆಯೊಂದಿಗೆ ಇತರ ಅಧಿಕಾರಿಗಳ ಸಹಾಯ ಪಡೆದು ಕ್ರಮ ಕೈಗೊಳ್ಳಲಿದೆ.

ಯಾವುದೇ ಮಾಹಿತಿ ಅಥವಾ ದೂರು ಸಲ್ಲಿಸಲು ಇಚ್ಛಿಸುವವರು ವಾಟ್ಸಪ್ ಮೂಲಕ 9480819724 ಸಂಖ್ಯೆಗೆ ವಿವರ ಕಳುಹಿಸಬಹುದು. ದೂರುದಾರರ ವಿವರಗಳನ್ನು ಸಂಪೂರ್ಣ ಗೌಪ್ಯವಾಗಿಡಲಾಗುತ್ತದೆ ಎಂದು ಟ್ರಸ್ಟ್ ತಿಳಿಸಿದೆ.

ಹೆಚ್ಚಿನ ಮಾಹಿತಿಗಾಗಿ ಮುಖ್ಯ ಜಾಗೃತಾಧಿಕಾರಿಗಳು, ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್, "ಆರೋಗ್ಯ ಸೌಧ", 7ನೇ ಮಹಡಿ, 1ನೇ ಕ್ರಾಸ್, ಮಾಗಡಿ ರಸ್ತೆ, ಬೆಂಗಳೂರು-560023 ಅವರನ್ನು ಸಂಪರ್ಕಿಸಬಹುದು. ದೂರವಾಣಿ: 9480819724, ಉಚಿತ ಸಹಾಯವಾಣಿ: 18004258330 ಹಾಗೂ ಇಮೇಲ್: cvosast@gmail.com ಮೂಲಕವೂ ಸಂಪರ್ಕಿಸಲು ಅವಕಾಶವಿದೆ ಎಂದು ಪ್ರಕಟಣೆ ತಿಳಿಸಿದೆ.

# ಹಿಂದೂರಾಷ್ಟ್ರ ಸ್ಥಾಪನೆಯಾದ ಬಳಿಕವೇ ವಿಜಯನಗರ ಸಾಮ್ರಾಜ್ಯದ ಗತವೈಭವ ಕಾಣಲು ಸಾಧ್ಯ: ಗುರುಪ್ರಸಾದ ಗೌಡ



> ಹಿಂದೂಗಳ ಸಂಘಟನೆ ಮತ್ತು ಹಿಂದೂರಾಷ್ಟ್ರ ಸ್ಥಾಪನೆಯ ಉದ್ದೇಶದಿಂದ ಎಲ್ಲರೂ ಜಾತಿ-ಪಂಥ ಮರೆತು ಒಂದಾಗಿ ಕೆಲಸ ಮಾಡಬೇಕು. ಕೇವಲ ಭಾಷಣಗಳಿಗೆ ಸೀಮಿತವಾಗದೆ ಪ್ರತಿದಿನ ಕನಿಷ್ಠ ಒಂದು ಗಂಟೆ ಧರ್ಮಕಾರ್ಯಗಳಿಗೆ ಮೀಸಲಿಡಬೇಕು ಎಂದು ಕರೆ ನೀಡಿದರು. ದೇವಾಲಯಗಳ ಸರಕಾರೀಕರಣ, ವಕ್ಫ್ ಕಾನೂನಿನ ದುರ್ಬಳಕೆ, ಲವ್ ಜಿಹಾದ್, ಹಲಾಲ್ ಜಿಹಾದ್, ಬಲವಂತದ ಮತಾಂತರ ಇತ್ಯಾದಿ ವಿಚಾರಗಳನ್ನು ಉಲ್ಲೇಖಿಸಿ, ದೇವಾಲಯಗಳ ರಕ್ಷಣೆ ಹಾಗೂ ಧಾರ್ಮಿಕ ಸ್ವಾತಂತ್ರ್ಯಕ್ಕಾಗಿ ಹಿಂದೂರಾಷ್ಟ್ರ ಘೋಷಣೆ ಅಗತ್ಯವಿದೆ ಎಂದು ಅಭಿಪ್ರಾಯಪಟ್ಟರು.

■ ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ

ಪಟ್ಟಣದಲ್ಲಿ 'ಹಿಂದೂ ರಾಷ್ಟ್ರ-ಜಾಗೃತಿ ಸಭೆ' ಭಾನುವಾರ ವಿಜೃಂಭಣೆಯಿಂದ ಜರುಗಿತು. ನಗರದ ರಾಷ್ಟ್ರೋತ್ಥಾನ ಶಾಲೆಯ ವಿದ್ಯಾರಣ್ಯ ಸಭಾಭವನದಲ್ಲಿ ಹಿಂದೂ ಜನಜಾಗೃತಿ ಸಮಿತಿ ವತಿಯಿಂದ ಆಯೋಜಿಸಲಾದ ಕಾರ್ಯಕ್ರಮದಲ್ಲಿ ಮಾತನಾಡಿದ ಗುರುಪ್ರಸಾದ ಗೌಡ ಅವರು, "ವಿಜಯನಗರ ಸಾಮ್ರಾಜ್ಯದ ಗತವೈಭವವನ್ನು ಮತ್ತೊಮ್ಮೆ ಕಾಣಬೇಕೆಂದರೆ ಭಾರತವು ಹಿಂದೂರಾಷ್ಟ್ರವಾಗಿ ರೂಪುಗೊಂಡ ಬಳಿಕವೇ ಸಾಧ್ಯ" ಎಂದು ಅಭಿಪ್ರಾಯಪಟ್ಟರು.

ಹಿಂದೂ ಸಮಾಜದ ಮೇಲೆ ನಡೆಯುತ್ತಿರುವ ಆಘಾತಗಳು, ಹಲ್ಲೆಗಳು, ಗೋಹತ್ಯೆ, ದೇವರ ಅವಮಾನ ಮುಂತಾದ ವಿಷಯಗಳ ಕುರಿತು ಜಾಗೃತಿ ಮೂಡಿಸಲು ಕಳೆದ 23 ವರ್ಷಗಳಿಂದ ಧರ್ಮಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ ಎಂದು ಅವರು ತಿಳಿಸಿದರು.

ಅಯೋಧ್ಯೆಯಲ್ಲಿ ರಾಮಮಂದಿರದಲ್ಲಿ ಭಗವಾಧ್ವಜ ಸ್ಥಾಪನೆಯಾದ ಬಳಿಕ ಹಿಂದೂರಾಷ್ಟ್ರ ಸ್ಥಾಪನೆಯ ಯುಗದ ಮೊದಲ ಹೆಜ್ಜೆ ಇಟ್ಟಂತಾಗಿದೆ ಎಂಬುದಾಗಿ ಹೇಳಿದರು.

"ಹಿಂದೂ ರಾಷ್ಟ್ರದಲ್ಲಿ ಯಾವುದೇ ಸಮಾಜದ ಮೇಲೆ ಅತ್ಯಾಚಾರ ಅಥವಾ ಅಪಮಾನ ನಡೆಯುವುದಿಲ್ಲ. ನಮ್ಮ ಸನಾತನ ಧರ್ಮ 'ಸರ್ವೇ ಜನ ಸುಖಿನೋ ಭವಂತು' ಎಂಬ ಮೌಲ್ಯವನ್ನು ಸಾರುತ್ತದೆ" ಎಂದು ಅವರು ಹೇಳಿದರು.

ಕಾರ್ಯಕ್ರಮವು ದೀಪಪ್ರಜ್ವಲನೆ ಮತ್ತು ಶಂಖನಾದದೊಂದಿಗೆ ಪ್ರಾರಂಭವಾಯಿತು. ಸೌ. ಸುಮಾ ಕುಂಬಾರ ಕಾರ್ಯಕ್ರಮ ನಿರೂಪಣೆ ಮಾಡಿದರು. ಸುಮಾರು 300 ಕ್ಕೂ ಅಧಿಕ ಮಂದಿ ಭಾಗವಹಿಸಿದ್ದರು.

ಇದೇ ಸಂದರ್ಭದಲ್ಲಿ ನಿವೃತ್ತ ಶಿಕ್ಷಕರಾದ ಸೋಮನಗೌಡ ಪಾಟೀಲ ಮಾತನಾಡಿ, ಹಿಂದೂ ಸಮಾಜ ಜಾತಿ ಭೇದ ಮರೆತು ಒಂದಾಗಿ ಬಂದರೆ ಸಮಾಜದ ಮೇಲೆ ನಡೆಯುತ್ತಿರುವ ಅನ್ಯಾಯಗಳ ವಿರುದ್ಧ ಹೋರಾಡಲು ಸಾಧ್ಯ ಎಂದು ಹೇಳಿದರು.

## 30 ಜನರಿಂದ ರಕ್ತದಾನ – 80ಕ್ಕೂ ಹೆಚ್ಚು ಜನರ ರಕ್ತಗುಂಪು ಪರೀಕ್ಷೆ

▶▶ ಮೊದಲನೇ ಪುಟದಿಂದ

ಸಾಧ್ಯವೆಂದು ಸಲಹೆ ನೀಡಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಮಹಾವಿದ್ಯಾಲಯದ ಪ್ರಾಚಾರ್ಯ ಆರ್.ಎಸ್. ದಾನರಡ್ಡಿ ವಹಿಸಿದ್ದರು. ಮುಖ್ಯ ಅತಿಥಿಗಳಾಗಿ ಜಿಲ್ಲಾ ಆರೋಗ್ಯ ಮೇಲ್ವಿಚಾರಕ ಬಸವರಾಜ ಲಾಲ ಹಟ್ಟಿ, ಭಾವಸಾರ ವ್ಹಿಜನ್ ಇಂಡಿಯಾ ಗದಗ ಘಟಕದ ಅಧ್ಯಕ್ಷ ಶ್ರೀಪಾದ ವೈಕುಂಠೆ ಹಾಗೂ ಅಂಬಿಕಾ ರಕ್ತನಿಧಿ ಕೇಂದ್ರದ ವ್ಯವಸ್ಥಾಪಕ ರೋಹಿತ್ ಚವ್ಹಾಣ ಉಪಸ್ಥಿತರಿದ್ದರು.

ರಕ್ತತಪಾಸಿಗರಾದ ಡಾ. ದತ್ತಾತ್ರೇಯ ವೈಕುಂಠೆ ಅವರು ರಕ್ತತಪಾಸಣೆ ನೆರವೇರಿಸಿ, ಪ್ರತಿಯೊಬ್ಬರೂ ತಮ್ಮ ರಕ್ತಗುಂಪಿನ ಬಗ್ಗೆ ಮಾಹಿತಿ ಹೊಂದಿರಬೇಕು ಹಾಗೂ ಕನಿಷ್ಠ ವರ್ಷಕ್ಕೊಮ್ಮೆ ರಕ್ತದಾನ ಮಾಡುವ ಮನೋಭಾವ ಬೆಳೆಸಿಕೊಳ್ಳಬೇಕು ಎಂದು ತಿಳಿಸಿದರು.

ಶಿಬಿರದಲ್ಲಿ ಅಶ್ವಥ್ ಸುಲಾಖೆ, ಆರ್.ಎಸ್. ತ್ರಿಮಲ್ಲೇ, ವೀರಣ್ಣ ಬೆಳಮಕರ, ಶ್ರೀಮತಿ ವಿಜಯಾ ನವಲೆ, ಪ್ರೊ. ಬಸವರಾಜ ಪೂಜಾರ, ಪ್ರೊ. ಮಂಜುಳಾ ಹೊಂಬಾಳಿ, ಪ್ರೊ. ಜೋಬಾಳೆ, ಡಾ. ವ್ಹಿ.ಎ. ನಿಂಗೋಜಿ ಸೇರಿದಂತೆ ಹಲವರು ಭಾಗವಹಿಸಿದ್ದರು.

## ಮಾ.17ರಂದು ಅನುಪಯುಕ್ತ ಕಬ್ಬಾ ಸಾಮಗ್ರಿಗಳ ಬಹಿರಂಗ ಹರಾಜು

■ ವಿಜಯಸಾಕ್ಷಿ ಸುದ್ದಿ, ಗದಗ

ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆ ಹೊಂಬಳ ಉಗ್ರಾಣದಲ್ಲಿರುವ ವಿವಿಧ ಅನುಪಯುಕ್ತ ಕಬ್ಬಾ ಸಾಮಗ್ರಿಗಳನ್ನು ಬಹಿರಂಗ ಹರಾಜಿನ ಮೂಲಕ ವಿಲೇವಾರಿ ಮಾಡಲು ನಿರ್ಧರಿಸಲಾಗಿದೆ. ಇಲೆಕ್ಟ್ರಿಷಿಯನ್ ಹಾಗೂ ಫಿಟ್ಟರ್ ವೃತ್ತಿಗೆ ಸಂಬಂಧಿಸಿದ ಹಳೆಯ ಮತ್ತು ಬಳಕೆಗೆ ಅನರ್ಹವಾದ ವಸ್ತುಗಳ ಹರಾಜು ಪ್ರಕ್ರಿಯೆ ದಿನಾಂಕ 17–03–2026 ರಂದು ಪೂರ್ವಾಹ್ನ 11.00 ಗಂಟೆಗೆ ಸಂಸ್ಥೆಯ ಆವರಣದಲ್ಲಿ ನಡೆಯಲಿದೆ. ಹರಾಜಿನಲ್ಲಿ ಭಾಗವಹಿಸಲು ಆಸಕ್ತರು ಸೂಚಿಸಿದ ದಿನಾಂಕ ಹಾಗೂ ವೇಳೆಗೆ ಹಾಜರಾಗುವಂತೆ ಪ್ರಕಟಣೆಯಲ್ಲಿ ತಿಳಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಸಂಸ್ಥೆಯ ಕಚೇರಿ ಮೊಬೈಲ್ ಸಂಖ್ಯೆ 8792669959 ಅನ್ನು ಸಂಪರ್ಕಿಸಬಹುದು.

### ಕಾಂಗ್ರೆಸ್ ಅಭ್ಯರ್ಥಿ ಪರ ನಡೆದ ಚುನಾವಣಾ ಪೂರ್ವಭಾವಿ ಸಭೆಯಲ್ಲಿ ಮೋಹನ ಲಿಂಬಿಕಾಯಿ

# ಬದ್ಧತೆ, ಪ್ರಾಮಾಣಿಕತೆಯಿಂದ ಸೇವೆ ಮಾಡುವೆ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಶ್ಚಿಮ ಪದವೀಧರರ ಕ್ಷೇತ್ರ ಧಾರವಾಡ, ಹಾವೇರಿ, ಗದಗ, ಕಾರವಾರ ಜಿಲ್ಲೆಗಳನ್ನೊಳಗೊಂಡ ವಿಶಾಲ ಕ್ಷೇತ್ರವಾಗಿದ್ದು, ಈ ಬಾರಿ ಪದವೀಧರ ಕ್ಷೇತ್ರದಿಂದ ಸ್ಪರ್ಧಿಸಲು ಕಾಂಗ್ರೆಸ್ ಪಕ್ಷ ನನಗೆ ಅವಕಾಶ ನೀಡಿದ್ದು, ಬದ್ಧತೆ, ಪ್ರಾಮಾಣಿಕತೆಯಿಂದ ಜನರ ಸೇವೆ ಮಾಡುವ ಹಾಗೂ ಪದವೀಧರರ ಧ್ವನಿಯಾಗಿ ಕಾರ್ಯ ಮಾಡುವ ಉದ್ದೇಶವನ್ನು ಹೊಂದಿದ್ದೇನೆ ಎಂದು ಪಶ್ಚಿಮ ಪದವೀಧರ ಕ್ಷೇತ್ರದ ಕಾಂಗ್ರೆಸ್ ಪಕ್ಷದ ನಿಯೋಜಿತ ಅಭ್ಯರ್ಥಿ ಮೋಹನ ಲಿಂಬಿಕಾಯಿ ಹೇಳಿದರು.

ಅವರು ಪಟ್ಟಣದ ತಾಯಿ ಪಾರ್ವತಿ ಮಕ್ಕಳ ಬಳಗದ ಸಭಾಂಗಣದಲ್ಲಿ ಲಕ್ಷ್ಮೇಶ್ವರ ಬ್ಲಾಕ್ ಕಾಂಗ್ರೆಸ್ ವತಿಯಿಂದ ಮುಂಬರುವ ಪಶ್ಚಿಮ ಪದವೀಧರ ವಿಧಾನ ಪರಿಷತ್ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಪರ ನಡೆದ ಚುನಾವಣಾ ಪೂರ್ವಭಾವಿ ಸಭೆಯಲ್ಲಿ ಮಾತನಾಡಿದರು.




ಈ ಕ್ಷೇತ್ರದಲ್ಲಿ ಈಗಾಗಲೇ 88 ಸಾವಿರಕ್ಕೂ ಅಧಿಕ ಪದವೀಧರರು ನೋಂದಣೀಯಾಗಿದ್ದು, 1984ರಿಂದ 2008ರವರೆಗೆ ಈಗಿನ ಸಚಿವ ಡಾ. ಎಚ್.ಕೆ. ಪಾಟೀಲ ಪ್ರತಿನಿಧಿಸುತ್ತಾ ಬಂದಿದ್ದರು. ಅವರು ಹಾಕಿಕೊಟ್ಟ ಮಾರ್ಗದರ್ಶನದಲ್ಲಿ ನಾನು ಸಹ ಕ್ಷೇತ್ರದಲ್ಲಿ ಉತ್ತಮ ಕಾರ್ಯವನ್ನು ಮಾಡುವ ಉದ್ದೇಶವನ್ನು ಹೊಂದಿದ್ದು, ಬದ್ಧತೆ, ಪ್ರಾಮಾಣಿಕವಾಗಿ ಜನರ ಸೇವೆ ಮಾಡಿದ್ದು ಪದವೀಧರರ ಕುಂದು–ಕೊರತೆಗಳನ್ನು ಸರಕಾರ ಮಟ್ಟದಲ್ಲಿ ಪ್ರಶ್ನಿಸುವ ನಿಟ್ಟಿನಲ್ಲಿ ವಿಶೇಷವಾಗಿ ಕಾರ್ಯ ಮಾಡಿದ್ದು, ಮುಂದಿನ ದಿನಗಳಲ್ಲಿಯೂ ಈ ಕಾರ್ಯವನ್ನು ಮುಂದುವರೆಸುತ್ತೇನೆ. ಮುಂಬರುವ ಪಶ್ಚಿಮ ಪದವೀಧರ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿಯಾಗಿದ್ದು, ಎಲ್ಲರೂ ಮತ ನೀಡಿ ಆಶೀರ್ವಾದಿಸಿದರೆ, ಎಲ್ಲರ ಪ್ರೀತಿ ವಿಶ್ವಾಸ, ನಂಬಿಕೆಗೆ ದ್ರೋಹ ಬಗೆಯದಂತೆ ಕೆಲಸ ನಿರ್ವಹಿಸುವದಾಗಿ ಹೇಳಿದರು.

ಮಾಜಿ ಶಾಸಕರುಗಳಾದ ರಾಮಣ್ಣ ಲಮಾಣಿ, ರಾಮಕೃಷ್ಣ ದೊಡ್ಡಮನಿ, ಜಿ.ಪಂ ಮಾಜಿ ಅಧ್ಯಕ್ಷ ಎಸ್.ಪಿ. ಬಳಿಗಾರ ಮಾತನಾಡಿ, ಪಶ್ಚಿಮ ಪದವೀಧರ ಕ್ಷೇತ್ರದಲ್ಲಿ ಈ ಬಾರಿ ಕಾಂಗ್ರೆಸ್ ಹೆಚ್ಚು ಮತಗಳನ್ನು ಪಡೆದು ಕ್ರಿಯಾಶೀಲ ವ್ಯಕ್ತಿತ್ವದ ಮೋಹನ ಲಿಂಬಿಕಾಯಿ ಆಯ್ಕೆಯಾಗುವಂತೆ ಎಲ್ಲರೂ ವಿಶೇಷವಾಗಿ ಕಾರ್ಯನಿರ್ವಹಿಸುತ್ತೇವೆ ಎಂದರು.

ಹಿರಿಯ ಮುಖಂಡ ಹಾಗೂ ನಿಗಮ ಮಂಡಳಿ ಅಧ್ಯಕ್ಷ ನಂಜಯ್ಯನಮಠ ಮಾತನಾಡಿ, ಮೋಹನ ಲಿಂಬಿಕಾಯಿಯವರು ಕ್ರಿಯಾಶೀಲ ವ್ಯಕ್ತಿಯಾಗಿದ್ದಾರೆ. ಸಾಮಾಜಿಕ ಕಳಕಳಿ, ಸಮಾಜದ ಬಗ್ಗೆ ಚಿಂತನೆಗಳ ಬಗ್ಗೆ ಕಾಳಜಿ ಹೊಂದಿರುವ ಅಭ್ಯರ್ಥಿಯಾಗಿದ್ದು, ಇವರ ಆಯ್ಕೆ ಪದವೀಧರರಿಗೆ ದೊಡ್ಡ ಧ್ವನಿಯಾಗಲಿದೆ ಎಂದರು.

ಹಾವೇರಿ ಲೋಕಸಭಾ ಕ್ಷೇತ್ರದ ಯುವ ಮುಖಂಡ ಆನಂದಸ್ವಾಮಿ ಗಡ್ಡದೇವರಮಠ ಮಾತನಾಡಿ, ಪಶ್ಚಿಮ ಪದವೀಧರ ಚುನಾವಣೆ ಒಂದು ರೀತಿ ಮಾರ್ಗಸೂಚಿ ಚುನಾವಣೆ ಇದ್ದಂತೆ. ಈ ಚುನಾವಣೆ ವ್ಯಕ್ತಿತ್ವದ ಮೇಲೆ ಅವಲಂಬಿತವಾಗಿದ್ದು, ಪದವೀಧರರ ಮತಗಳು ಪೊಳ್ಳು ಭರವಸೆಗಳಿಗೆ ಬಲಿಯಾಗದೆ ಅರ್ಹ ಮತ್ತು ಜನಮುಖಿ ವ್ಯಕ್ತಿ ಮೋಹನ್ ಲಿಂಬಿಕಾಯಿಯವರಿಗೆ ನೀಡಲು ಮುಂದಾಗಬೇಕು ಎಂದು ಮನವಿ ಮಾಡಿದರು. ಸಭೆಯಲ್ಲಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಜಿ.ಆರ್. ಕೊಪ್ಪದ, ನಗರ ಘಟಕ ಅಧ್ಯಕ್ಷ ಅಮರೇಶ ತೆಂಬದಮನಿ, ಸೋಮಣ್ಣ ಬೆಟಗೇರಿ, ಎಂ.ಎಂ. ಗದಗ, ಸುರೇಶ ನಾವಿ, ಗುರುನಾಥ ದಾನಪ್ಪನವರ, ಮಹೇಶ ಹೊಗೆಸೊಪ್ಪಿನ, ಶರಣು ಗೋಡಿ, ರಂಜನ್ ಪಾಟೀಲ, ಯಲ್ಲಪ್ಪ ತಳವಾರ, ವಿ.ಜಿ. ಪಡಗೇರಿ, ದೀಪಕ ಲಮಾಣಿ, ರಾಜು ಪಾಟೀಲ, ಆದಪ್ಪಗೌಡ್ರ ಪಾಟೀಲ, ಎಂ.ಆರ್. ಸೋಂಪೂರ, ಅಂದಾನಯ್ಯ ಕುರ್ತಕೋಟಿಮಠ, ಮಹೇಶ ಹಾರೋಗೇರಿ, ಎಸ್.ಕೆ. ಹವಾಲ್ದಾರ, ಡಿ.ಜೆ. ಮುಚ್ಚಾಲೆ, ಸತೀಶ ಪಾಟೀಲ, ಪದ್ಮರಾಜ ಪಾಟೀಲ, ಕಮತದ, ರಮೇಶ ಕಲಬುರ್ಗಿ ಸೇರಿದಂತೆ ಅನೇಕರು ಹಾಜರಿದ್ದರು. ಕಿರಣ ನವಲೆ ಕಾರ್ಯಕ್ರಮ ನಿರೂಪಿಸಿದರು.

## ಮಕ್ಕಳ ಕೈಗೆ ಮೊಬೈಲ್ ಕೊಡಬೇಡಿ




■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಇತ್ತೀಚಿನ ದಿನಗಳಲ್ಲಿ ಮೊಬೈಲ್ ಬಳಕೆ ಅತಿಯಾಗುತ್ತಿದ್ದು, ಇದು ಮಕ್ಕಳ ಮೇಲೆ ಹೆಚ್ಚು ದುಷ್ಪರಿಣಾಮಗಳನ್ನು ಬೀರುತ್ತಿರುವದು ಪರೀಕ್ಷೆಗಳಿಂದ ಸಾಬೀತಾಗಿದೆ. ಪಾಲಕರು ಮಕ್ಕಳ ಕೈಗೆ ಮೊಬೈಲ್ ಕೊಡುವದನ್ನು ಬಿಡಬೇಕು ಎಂದು ಚನ್ನಮ್ಮ ಡಿಇಡಿ ಕಾಲೇಜಿನ ಪ್ರಾಚಾರ್ಯ ಆರ್.ಎಂ. ಅಂಗಡಿ ಹೇಳಿದರು.

ಅವರು ಪಟ್ಟಣದ ದಿ ಯೂನಿಕ್ ಇಂಗ್ಲಿಷ್ ಮಾಧ್ಯಮ ಶಾಲೆಯಲ್ಲಿ ರಾಷ್ಟ್ರೀಯ ವಿಜ್ಞಾನ ದಿನದ ಅಂಗವಾಗಿ ವಿದ್ಯಾರ್ಥಿಗಳಿಗೆ ಹಾಗೂ ಪಾಲಕರಿಗೆ ಮೊಬೈಲ್ ಅತಿಯಾದ ಬಳಕೆ ಹಾಗೂ ಜಂಕ್ ಫುಡ್‌ಗಳ ದುಷ್ಪರಿಣಾಮಗಳ ಕುರಿತ ಕಾರ್ಯಕ್ರಮದಲ್ಲಿ ಮಾತನಾಡಿದರು.

ಕರೋನಾ ವೇಳೆ ಶಾಲೆಯ ಮಕ್ಕಳಿಗೆ ಆನ್‌ಲೈನ್ ಶಿಕ್ಷಣ ಪ್ರಾರಂಭವಾದಾಗಿನಿಂದ ಈ ಮೊಬೈಲ್ ಬಳಕೆ ಮಕ್ಕಳಲ್ಲಿ ಹೆಚ್ಚಾಗುವದಕ್ಕೆ ಕಾರಣವಾಯಿತು. ಶಾಲಾ ಮಕ್ಕಳಲ್ಲಿ ಹೆಚ್ಚುತ್ತಿರುವ ಮೊಬೈಲ್ ಗೀಳನ್ನು ಬಿಡಿಸಲು ಪಾಲಕರ ಸಹಕಾರ ಅತ್ಯಗತ್ಯ. ಪಾಲಕರು ಸಹ ಅತಿಯಾಗಿ ಮೊಬೈಲ್ ಬಳಸಬಾರದು. ಮಕ್ಕಳ ಬಗ್ಗೆ ಪಾಲಕರು ವಿಶೇಷ ಕಾಳಜಿ ವಹಿಸಬೇಕು ಎಂದು ಹೇಳಿದರು.

ಆಯುಷ್ ವೈದ್ಯಾಧಿಕಾರಿ ಡಾ. ಸಂಜೀವಕುಮಾರ ಬಿರಾದಾರ ಮಾತನಾಡಿ, ಜಂಕ್ ಫುಡ್ ಇತ್ತೀಚಿನ ದಿನಗಳಲ್ಲಿ ಬದುಕಿನ ಅವಿಭಾಜ್ಯ ಅಂಗವೇ ಆಗಿದೆ. ರಸ್ತೆ ಬದಿಯಲ್ಲಿ ಎಲ್ಲೆಂದರಲ್ಲಿ ಜಂಕ್‌ಫುಡ್‌ಗಳ ಹಾವಳಿ ಹೆಚ್ಚಾಗುತ್ತಿದ್ದು, ಇದು ಮಕ್ಕಳ ಆರೋಗ್ಯದ ಮೇಲೆ ಪರಿಣಾಮ ಬೀರುವದು.

ಆರೋಗ್ಯವನ್ನು ಸುಸ್ಥಿರವಾಗಿರಿಸಬೇಕೆಂದರೆ ಜಂಕ್‌ಫುಡ್ ಸೇವನೆ ಬಿಡುವುದು ಅನಿವಾರ್ಯ ಎಂದು ಹೇಳಿದರು.

ಮುಖ್ಯೋಪಾಧ್ಯಾಯ ಅರವಿಂದ ದೇಶಪಾಂಡೆ ಅಧ್ಯಕ್ಷತೆ ವಹಿಸಿದ್ದರು. ನೂರಾರು ವಿದ್ಯಾರ್ಥಿಗಳು ಮತ್ತು ಪಾಲಕರು ಕಾರ್ಯಕ್ರಮದಲ್ಲಿ ಇದ್ದರು.

ಈ ಸಂದರ್ಭದಲ್ಲಿ ಸಂಸ್ಥೆಯ ನಿರ್ದೇಶಕರಾದ ವ್ಹಿ.ಡಿ. ಘೋರ್ಪಡೆ, ಎಸ್.ಎಸ್. ಗುಡಗೇರಿ, ಎಸ್.ಜಿ. ಕುಂಬಾರ, ಕಸಾಪ ಅಧ್ಯಕ್ಷ ಈಶ್ವರ ಮೆಡ್ಲೇರಿ, ನಾಗರಾಜ ಮಜ್ಜಿಗುಡ್ಡ. ಇದ್ದರು ಈರಣ್ಣ ಗಾಣಿಗೇರ ಕಾರ್ಯಕ್ರಮ ನಿರ್ವಹಿಸಿದರು.

## ರಾಜ್ಯ ಮಟ್ಟದ ಪುಸ್ತಕ ಆಯ್ಕೆ: ತಿದ್ದುಪಡಿ ಮನವಿ ಸಲ್ಲಿಕೆಗೆ ಅವಕಾಶ

■ ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ಸರ್ಕಾರ ಸಾರ್ವಜನಿಕ ಗ್ರಂಥಾಲಯ ಇಲಾಖೆ ವತಿಯಿಂದ 2022ನೇ ಸಾಲಿನ ಪ್ರಥಮ ಮುದ್ರಣಗೊಂಡ ರಾಜ್ಯ ಮಟ್ಟದ ಪುಸ್ತಕಗಳ ಆಯ್ಕೆ ಪ್ರಕ್ರಿಯೆ ಪೂರ್ಣಗೊಂಡಿದೆ. ಆಯ್ಕೆಯಾದ ಪುಸ್ತಕಗಳ ಸಂಪೂರ್ಣ ಪಟ್ಟಿಯನ್ನು ಇಲಾಖೆಯ ಅಧಿಕೃತ ವೆಬ್‌ಸೈಟ್‌ನಲ್ಲಿ ಮಾರ್ಚ್ 02 ರಂದು ಪ್ರಕಟಿಸಲಾಗಿದೆ.

ರಾಜ್ಯ ಮಟ್ಟದ ಪುಸ್ತಕ ಆಯ್ಕೆ ಸಮಿತಿಯಿಂದ ಆಯ್ಕೆಯಾದ ಪುಸ್ತಕಗಳ ಲೇಖಕರು, ಲೇಖಕ–ಪ್ರಕಾಶಕರು, ಪ್ರಕಾಶಕರು ಹಾಗೂ ಪುಸ್ತಕ ಮಾರಾಟಗಾರರು ತಮ್ಮ ಪುಸ್ತಕಗಳ ವಿವರಗಳನ್ನು ಪರಿಶೀಲಿಸಿಕೊಳ್ಳುವಂತೆ ಕೋರಲಾಗಿದೆ.

ಪುಸ್ತಕಗಳ ಶೀರ್ಷಿಕೆ, ಲೇಖಕರ ಹೆಸರು, ಪ್ರಕಾಶಕರ ಹೆಸರು, ಮುಖಬೆಲೆ, ನಿಗದಿತ ಬೆಲೆ, ಪುಸ್ತಕದ ಅಳತೆ, ಪುಟ ಸಂಖ್ಯೆ ಸೇರಿದಂತೆ ಇತರ ತಾಂತ್ರಿಕ ವಿವರಗಳಲ್ಲಿ ಯಾವುದೇ ವ್ಯತ್ಯಾಸಗಳಿದ್ದಲ್ಲಿ ಅವುಗಳನ್ನು ಸರಿಪಡಿಸಿಕೊಳ್ಳಲು ಅವಕಾಶ ನೀಡಲಾಗಿದೆ.

ಯಾವುದೇ ದೋಷಗಳು ಕಂಡುಬಂದಲ್ಲಿ, ಸಂಬಂಧಿತ ಅಧಿಕೃತ ದಾಖಲೆಗಳೊಂದಿಗೆ ಆಯುಕ್ತರು, ಸಾರ್ವಜನಿಕ ಗ್ರಂಥಾಲಯ ಇಲಾಖೆ, ವಿಶ್ವೇಶ್ವರಯ್ಯ ಮುಖ್ಯ ಗೋಪುರ, ಡಾ. ಅಂಬೇಡ್ಕರ್ ವೀಧಿ, 4ನೇ ಮಹಡಿ, ಬೆಂಗಳೂರು ಇವರಿಗೆ ಮಾರ್ಚ್ 16 ಸಂಜೆ 5.30ರೊಳಗಾಗಿ ಲಿಖಿತ ಮನವಿಯನ್ನು ಸಲ್ಲಿಸಬಹುದಾಗಿದೆ ಎಂದು ನಗರ ಕೇಂದ್ರ ಗ್ರಂಥಾಲಯದ ಮುಖ್ಯ ಗ್ರಂಥಾಲಯಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಭವಿಷ್ಯದ ಕಾರ್ಯಯೋಜನೆಗಳ ಕುರಿತು ಸಭೆ




■ ವಿಜಯಸಾಕ್ಷಿ ಸುದ್ದಿ, ಧಾರವಾಡ

ವಿದ್ಯಾಪೋಷಕ ವತಿಯಿಂದ ಧಾರವಾಡ ಮತ್ತು ಗದಗ ಜಿಲ್ಲೆಗಳ ಸ್ವಯಂಸೇವಕರ ಸಭೆಯನ್ನು ಧಾರವಾಡದ ಜೆಎಸ್‌ಎಸ್ ಕಾಲೇಜು ಆವರಣದಲ್ಲಿರುವ ಉತ್ಸವ ಹಾಲ್‌ನಲ್ಲಿ ಆಯೋಜಿಸಲಾಗಿತ್ತು.

ಕಾರ್ಯಕ್ರಮವನ್ನು ವಿದ್ಯಾಪೋಷಕದ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ. ಶರತ್ ಐರಣಿ ಉದ್ಘಾಟಿಸಿ ಮಾತನಾಡಿ, ಆರ್ಥಿಕವಾಗಿ ಹಿಂದುಳಿದ ಸಾವಿರಾರು ಬಡ ಪ್ರತಿಭಾನ್ವಿತ ವಿದ್ಯಾರ್ಥಿಗಳ ಬದುಕಿಗೆ ಆರ್ಥಿಕವಾಗಿ ಸಹಾಯವನ್ನು ನೀಡುವ ಮೂಲಕ ಬೆಳಕಾದ ಈ ಸಂಸ್ಥೆ 25 ವರ್ಷಗಳನ್ನು ನಿಸ್ವಾರ್ಥ ಸೇವೆಯಿಂದ ಪೂರೈಸಿದ್ದು, ಇದಕ್ಕೆ ಸಮಾಜದ ಭವಿಷ್ಯವನ್ನು ರೂಪಿಸಿದ ಸಾವಿರಾರು ಕೈಗಳ ಸಮೂಹದ ಪ್ರಯತ್ನವೇ ಕಾರಣವಾಗಿದೆ ಎಂದರು.

ವಿದ್ಯಾ ಪೋಷಕ ಸಂಸ್ಥೆಯ ಗೌರವ ಆಧ್ಯಕ್ಷರಾದ ಡಾ. ರವೀಂದ್ರ ಗುರುವಣ್ಣವರ ಸಂಸ್ಥೆಯ ಕಾರ್ಯಚಟುವಟಿಕೆಗಳು, ಭವಿಷ್ಯದ ಯೋಜನೆಗಳು ಹಾಗೂ ಸ್ವಯಂಸೇವಕರ ಪಾತ್ರದ ಕುರಿತು ಸಮಗ್ರ ಮಾಹಿತಿಯನ್ನು ನೀಡಿದರು. ಸಭೆಯಲ್ಲಿ ಎರಡೂ ಜಿಲ್ಲೆಗಳ ಸಮರ್ಪಿತ ಹಿರಿಯ ಸ್ವಯಂಸೇವಕರು, ದಾನಿಗಳು, ವಿದ್ಯಾಪೋಷಕದ ಮಾಜಿ ಸಿಬ್ಬಂದಿಗಳು ಹಾಗೂ ಯುವ (ಅಲ್ಯೂಮ್ನಿ) ಸದಸ್ಯರು ಭಾಗವಹಿಸಿದ್ದರು.

ಈ ಸಂದರ್ಭದಲ್ಲಿ ಗದಗ ಜಿಲ್ಲೆಯಿಂದ ಡಾ. ಸಂಗಮೇಶ ಸಜ್ಜನರ, ಡಾ. ಪಿ.ಎಸ್. ಕಣವಿ, ಡಾ. ಪ್ರಭು ಗಂಜಿಹಾಳ, ಆರ್.ಕೆ. ಭಾಗವಾನ, ಪ್ರೊ. ಮಂಜುನಾಥ ಹೊಳ್ಳಿಯವರ, ಪ್ರೊ. ಎಚ್.ಎನ್. ಕಾಳೆ, ವಿಜಯಕುಮಾರ ಸಜ್ಜನರ, ಶಶಿಧರ ಮಳಲಿ, ಮೊದಲಾದವರು ಭಾಗವಹಿಸಿದ್ದರು. ವಿದ್ಯಾಪೋಷಕ ಸಂಸ್ಥೆಯ ಫಾತಿಮಾ ಪಠಾಣ, ರತ್ನಾ ಹಿಪ್ಪರಗಿ, ಅನ್ನಪೂರ್ಣ ಯಡ್ರಾವಿ ಮತ್ತು ಸಿಬ್ಬಂದಿವರ್ಗ ಸಕ್ರಿಯವಾಗಿ ಪಾಲ್ಗೊಂಡಿದ್ದರು.

## ನವ ದಂಪತಿಗಳು ನಡೆ–ನುಡಿಗಳ ಪರಿಶುದ್ಧತೆಯೊಂದಿಗೆ ಬಾಳಿ

▶▶ ಮೊದಲನೇ ಪುಟದಿಂದ

ವೀರೇಶ್ವರ ಪುಣ್ಯಾಶ್ರಮದ ಪೂಜ್ಯಶ್ರೀ ಕಲ್ಲಯ್ಯಜ್ಜನವರು, ಶರಣೆ ನೀಲಮ್ಮ ತಾಯಿಯವರು, ಲಿಂಗಸೂರ ಮಾಣಿಕೇಶ್ವರಿ ಮಠದ ಉಜ್ಜಯನಿ ನಂದೀಶ್ವರಿ ಅಮ್ಮನವರು, ಮೌಲಾನಾ ಇನಾಯತವುಲ್ಲಾ ಫೀರಜಾದೆ, ಯುವ ಮುಖಂಡ ಸಚಿನ ಪಾಟೀಲ, ಕೆ.ಎಚ್. ಪಾಟೀಲ ಅಭಿಮಾನಿ ಬಳಗದ ಅಧ್ಯಕ್ಷ ಪೀರಸಾಬ ಕೌತಾಳ ಮುಂತಾದವರು ಉಪಸ್ಥಿತರಿದ್ದರು.

ವೀರೇಶ್ವರ ಪುಣ್ಯಾಶ್ರಮದ ವ್ಯವಸ್ಥಾಪಕರಾದ ಹೇಮರಾಜ ಶಾಸ್ತ್ರಿಗಳು ಪ್ರಾಸ್ತಾವಿಕವಾಗಿ ಮಾತನಾಡಿದರು. ದಿಯಾ ಪೀರಸಾಬ ಕೌತಾಳ ಪ್ರಾರ್ಥಿಸಿದರು. ಜೋಹರಾ ಪೀರಸಾಬ ಕೌತಾಳ ಗವಾಯಿಗಳವರ ಗದ್ದುಗೆಗೆ ಪುಷ್ಪಸೇವೆ ಸಲ್ಲಿಸಿದರು. ಪತ್ರಕರ್ತರಾದ ಆನಂದಯ್ಯ ವಿರಕ್ತಮಠ ಕಾರ್ಯಕ್ರಮ ನಿರೂಪಿಸಿದರು.

ಇದಕ್ಕೂ ಮುನ್ನ ವೀರೇಶ್ವರ ಪುಣ್ಯಾಶ್ರಮದಿಂದ 1012 ಕುಂಭೋತ್ಸವ ಮೆರವಣಿಗೆಗೆ ಜೋಹರಾ ಕೌತಾಳ ಅವರು ಚಾಲನೆ ನೀಡಿದರು.

## ಹೋಳಿ ಹಬ್ಬ ಹಿನ್ನೆಲೆ: ಗದಗ ಜಿಲ್ಲೆಯಲ್ಲಿ ಮದ್ಯ ಮಾರಾಟ–ಸಾಗಾಟ ನಿಷೇಧ

▶▶ ಮೊದಲನೇ ಪುಟದಿಂದ

ವ್ಯಾಪ್ತಿ ನಿಷೇಧಿತ ಅವಧಿಯಲ್ಲಿ ಸಂಬಂಧಪಟ್ಟ ಪ್ರದೇಶಗಳ ಎಲ್ಲಾ ಬಾರ್‌ಗಳು, ಕ್ಲಬ್‌ಗಳು, ಬಿಯರ್ ಪಾರ್ಲರ್‌ಗಳು ಹಾಗೂ ಭಾರತೀಯ ತಯಾರಿಕೆಯ ಮದ್ಯದ ಅಂಗಡಿಗಳನ್ನು ಮುಚ್ಚಬೇಕೆಂದು ಸೂಚಿಸಲಾಗಿದೆ.

ಪರಿಸ್ಥಿತಿಗೆ ಅನುಗುಣವಾಗಿ ಸಾರ್ವಜನಿಕ ಶಾಂತತೆಯನ್ನು ಕಾಪಾಡುವ ದೃಷ್ಟಿಯಿಂದ ವಲಯ ಅಬಕಾರಿ ಇನ್ಸ್‌ಪೆಕ್ಟರ್ ಹಾಗೂ ಅಬಕಾರಿ ಉಪ ಆಯುಕ್ತರು ಸೂಕ್ತ ಕ್ರಮ ಕೈಗೊಳ್ಳಬೇಕೆಂದು ಜಿಲ್ಲಾಡಳಿತ ಆದೇಶಿಸಿದೆ.

## ವಿದ್ಯಾರ್ಥಿ ಜೀವನಕ್ಕೆ ಎಸ್‌ಎಸ್‌ಎಲ್‌ಸಿ ಪ್ರಮುಖ ಘಟ್ಟ



■ ವಿಜಯಸಾಕ್ಷಿ ಸುದ್ದಿ, ಮುಳಗುಂದ

ವಿದ್ಯಾರ್ಥಿಗಳ ಮುಂದಿನ ಭವಿಷ್ಯಕ್ಕೆ ಎಸ್‌ಎಸ್‌ಎಲ್‌ಸಿ ಪ್ರಮುಖ ಘಟ್ಟವಾಗಿದೆ ಎಂದು ರಾಜೇಶ್ವರಿ ಬಡ್ನಿ ಹೇಳಿದರು. ಅವರು ಪಟ್ಟಣದ ಸರಕಾರಿ ಪ್ರೌಢಶಾಲೆಯ ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳಿಗೆ ಸಿ.ಬಿ. ಬಡ್ನಿ ಪ್ರತಿಷ್ಠಾನದ ವತಿಯಿಂದ ಪರೀಕ್ಷೆ ಎದುರಿಸುವ ಕ್ರಮಗಳ ಕುರಿತು ಮಾತನಾಡಿ, ಎಸ್‌ಎಸ್‌ಎಲ್‌ಸಿ ಪರೀಕ್ಷೆ ಬಗ್ಗೆ ಯಾರಲ್ಲೂ ಭಯ ಬೇಡ. ಸತತ ಅಭ್ಯಾಸ, ಆತ್ಮ ವಿಶ್ವಾಸ, ಗುರುಗಳು ಹೇಳಿದ ಪಾಠಗಳನ್ನು ನಿತ್ಯ ಮನನ ಮಾಡಿಕೊಂಡರೆ ಯಶಸ್ಸು ಕಟ್ಟಿಟ್ಟ ಬುತ್ತಿ ಎಂದರು.

ಶಾಲಾ ಪ್ರಧಾನ ಗುರು ಎಸ್. ಎಚ್. ಪೂಜಾರ, ಎಸ್‌ಡಿಎಂಸಿ ಅಧ್ಯಕ್ಷ ಮಾಹಾದೇವಪ್ಪ ಮಾನೇಗಾರ, ಮಾಹಾಂತೇಶ ಕೆಂಚನಾಯ್ಕರ್, ಸಹ ಶಿಕ್ಷಕರಾದ ನೂರಹ್ಮದ ನದಾಫ್, ವಿ.ಟಿ. ಅಂಗಡಿ, ಬಸವರಾಜ ಗೌರಿಮನಿ, ಎಸ್.ವಿ. ತಿಮ್ಮಾಪೂರ, ಗೀತಾ ಪಾಟೀಲ, ಗೀತಾ ಕುಂದರಗಿ ಹಾಗೂ ವಿದ್ಯಾರ್ಥಿಗಳು ಇದ್ದರು.

### ಸಂತ ಶ್ರೀ ಸೇವಾಲಾಲ್ ಮಾಹಾರಾಜರ ಜಯಂತ್ಯುತ್ಸವದಲ್ಲಿ ಮಿಥುನ್ ಪಾಟೀಲ ಅಭಿಮತ

# ಬಂಜಾರ ಸಮುದಾಯದ ಚಿಂತನೆ ಅನುಕರಣೀಯ



■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಬಂಜಾರ ಜನಾಂಗವು ತನ್ನ ವಿಶಿಷ್ಟ ಭಾಷೆ ಹಾಗೂ ಸಂಸ್ಕೃತಿಯಿಂದ ಶ್ರೀಮಂತವಾಗಿದೆ. ಸದಾ ಒಳಿತನ್ನು ಬಯಸುವ ಬಂಜಾರ ಸಮುದಾಯದ ಚಿಂತನೆ ಅನುಕರಣೀಯ ಎಂದು ರೋಣ ತಾಲೂಕು ಗ್ಯಾರಂಟಿ ಸಮಿತಿ ಅಧ್ಯಕ್ಷ ಮಿಥುನ್ ಜಿ.ಪಾಟೀಲ ಹೇಳಿದರು.

ಪಟ್ಟಣದ ಬಂಜಾರ ಸಮಾಜದ ವತಿಯಿಂದ ಜಕ್ಕಲಿ ರಸ್ತೆಯ ಆಶ್ರಯ ಕಾಲೋನಿಯಲ್ಲಿ ನಡೆದ ಸಂತ ಶ್ರೀ ಸೇವಾಲಾಲ್ ಮಾಹಾರಾಜರ 287ನೇ ಜಯಂತಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಲಂಬಾಣಿ ಸಮಾಜದವರು ಶ್ರಮಜೀವಿ, ಪ್ರಾಮಾಣಿಕತೆಗೆ ಹೆಸರುವಾಸಿಯಾದವರು. ಸಂತ ಸೇವಾಲಾಲ್‌ರು ಸಮಾಜಕ್ಕೆ ನೀಡಿದ ಕೊಡುಗೆ ಅಪಾರ. ನರೇಗಲ್ಲ ಪಟ್ಟಣದ ಬಂಜಾರ ಜನಾಂಗದ ಅಭಿವೃದ್ಧಿಗಾಗಿ ಶಾಸಕರ ಗಮನಕ್ಕೆ ತಂದು ಅಗತ್ಯತೆಗಳ ಪೂರೈಕೆಗೆ ಪ್ರಯತ್ನಿಸುತ್ತೇನೆ ಎಂದರು.

ರಾಜ್ಯ ಯುವ ಕಾಂಗ್ರೆಸ್ ಘಟಕದ ಪ್ರಧಾನ ಕಾರ್ಯದರ್ಶಿ ಅಕ್ಷಯ ಐ.ಪಾಟೀಲ ಮಾತನಾಡಿ, ಈ ಸಮುದಾಯದ ಸಂಸ್ಕೃತಿ ಶ್ರೀಮಂತವಾಗಿದೆ. ಇಂದಿಗೂ ತಮ್ಮ ಸಂಸ್ಕೃತಿಯನ್ನು ಉಳಿಸಿ ಬೆಳೆಸಿಕೊಂಡು ಸಾಗುತ್ತಿರುವ ಈ ಸಮುದಾಯದವರು ವಿದ್ಯಾವಂತರಾಗಿ ಸಮಾಜದ ಮುಖ್ಯವಾಹಿನಿಗೆ ಬರಬೇಕು ಎಂದರು.

ಕೊಪ್ಪಳ ಬಹದ್ದೂರಬಂಡಾ ಬಂಜಾರ ಪೀಠದ ಗುರು ಗೋಸಾಯಿಬಾವ ಸ್ವಾಮೀಜಿ ಮಾತನಾಡಿ, ಬಂಜಾರ ಸಮುದಾಯದ ಪವಾಡ ಪುರುಷ ಸೇವಾಲಾಲ್ ಸಮಾಜದಲ್ಲಿನ ಮೌಢ್ಯತೆ ತೊಡೆದು ಹಾಕಿದ ಸಂತರು. ಪ್ರಕೃತಿಯಲ್ಲಿನ ಪ್ರಾಣಿ–ಪಕ್ಷಿಗಳೊಂದಿಗೆ ಸಂಭಾಷಣೆ ನಡೆಸುತ್ತಿದ್ದ ಅವರು ಸಕಲ ಜೀವಜಂತುಗಳಿಗೆ ಒಳ್ಳೆಯದಾಗಲಿ ಎಂದು ಬಯಸಿದರು ಎಂದರು.

ಆಶೀರ್ವಚನ ನೀಡಿದ ನರೇಗಲ್ ಹಿರೇಮಠದ ಮಲ್ಲಿಕಾರ್ಜುನ ಶಿವಾಚಾರ್ಯರು, ಸೇವಾಲಾಲ್ ಮಹಾರಾಜರು ಈ ಸಮುದಾಯವನ್ನು ಸತ್ಯದ ಹಾದಿಯಲ್ಲಿ ಮುನ್ನಡೆಸಿದರು. ಅವರು ಸಮಾಜದ ಏಳಿಗೆಗೆ ನಿಸ್ವಾರ್ಥ ಸೇವೆ ಸಲ್ಲಿಸಿದ ಮಹಾನ್ ಸಂತರು. ಬಡವರಿಗಾಗಿ, ಸಮಾಜದ ಹಿತಕ್ಕಾಗಿ ನಿಸ್ವಾರ್ಥ ಸೇವೆ ಸಲ್ಲಿಸಿದ ದಾರ್ಶನಿಕರು ಎಂದರು.

ಕೊಡಗಲಿಯ ಸಂತೋಷ ಮಹಾರಾಜ್ ಮತ್ತು ನಿವೃತ್ತ ಶಿಕ್ಷಕ ತಾರಾಸಿಂಗ್ ರಾಠೋಡ ವಿಶ್ವ ಶಾಂತಿಗಾಗಿ ಭೋಗ್ ಸಮರ್ಪಣೆ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಉಪನ್ಯಾಸ ನೀಡಿದರು. ವಿವಿಧ ಕ್ಷೇತ್ರದ ಸಾಧಕರನ್ನು, ದಾನಿಗಳನ್ನು ಸನ್ಮಾನಿಸಲಾಯಿತು. ಮುಖಂಡರಾದ ನಿಂಗನಗೌಡ ಲಕ್ಕನಗೌಡ್ರ, ವೀರನಗೌಡ ಪಾಟೀಲ, ಅಲ್ಲಾಬಕ್ಷಿ ನದಾಫ್, ಮೈಲಾರಪ್ಪ ಚಳ್ಳಮರದ, ಹನಮಂತಪ್ಪ ಅಬ್ಬಿಗೇರಿ, ಕಳಕನಗೌಡ ಪೊಲೀಸ್‌ಪಾಟೀಲ, ಮೃತ್ಯುಂಜಯ ಧಡೇಸೂರಮಠ, ಉದ್ಯಮಿ ಬಸವರಾಜ ವಂಕಲಕುಂಟಿ, ಕುಮಾರಸ್ವಾಮಿ ಕೋರಧಾನ್ಯಮಠ, ದಾದಾಸಾಬ್ ನದಾಫ್, ಗುಡದಪ್ಪ ಗೋಡಿ, ಸದ್ದಾಂ ನಶೇಖಾನ್, ದೇವಕ್ಕ ರಾಠೋಡ ಇದ್ದರು. ಚಂದ್ರು ರಾಠೋಡ ನಿರ್ವಹಿಸಿದರು.

## ಸದಸ್ಯತ್ವ ನವೀಕರಣ /ಹೊಸ ಅರ್ಜಿಗೆ ಮಾರ್ಚ್ 8 ಕೊನೆ ದಿನ

■ ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ 2026–27ನೇ ಸಾಲಿನ ಸದಸ್ಯತ್ವ ನವೀಕರಣ ಹಾಗೂ ಹೊಸ ಸದಸ್ಯತ್ವಕ್ಕಾಗಿ ಅರ್ಜಿ ಸಲ್ಲಿಸಲು ಮಾರ್ಚ್ 8 ಕೊನೆಯ ದಿನವಾಗಿದ್ದು, ರಾಜ್ಯ ಸಮಿತಿಯ ನಿರ್ದೇಶನದ ಮೇರೆಗೆ ಗದಗ ಜಿಲ್ಲಾ ಘಟಕದಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಮಾರ್ಚ್ 1ರಿಂದ ಗದಗ ನಗರದ ಮುಳಗುಂದ ರಸ್ತೆಯ ಪತ್ರಿಕಾ ಭವನದಲ್ಲಿ ಭಾನುವಾರ ಹಾಗೂ ರಜಾದಿನಗಳನ್ನು ಹೊರತುಪಡಿಸಿ ಬೆಳಿಗ್ಗೆ 10ರಿಂದ ಮಧ್ಯಾಹ್ನ 2 ಗಂಟೆಯವರೆಗೆ ಅರ್ಜಿಗಳು ಲಭ್ಯವಿವೆ. ಗದಗ ಜಿಲ್ಲಾ ಕೇಂದ್ರದ ಪತ್ರಕರ್ತರು ಭರ್ತಿ ಮಾಡಿದ ಅರ್ಜಿಗಳನ್ನು ಗದಗ ಪತ್ರಿಕಾ ಭವನದಲ್ಲೇ ಸಲ್ಲಿಸಬೇಕು. ತಾಲೂಕು ಕೇಂದ್ರದ ಪತ್ರಕರ್ತರು ತಮ್ಮ ತಮ್ಮ ತಾಲೂಕಿನ ಅಧ್ಯಕ್ಷರ ಬಳಿ ಅರ್ಜಿ ಸಲ್ಲಿಸಲು ಸೂಚಿಸಲಾಗಿದೆ.

ಅಗತ್ಯ ದಾಖಲೆಗಳು: ಹಿಂದಿನ ವರ್ಷದ ಸಂಘದ ಸದಸ್ಯತ್ವ ಕಾರ್ಡ್ (ನವೀಕರಣಕ್ಕೆ ಮಾತ್ರ) ಸಂಪಾದಕರು ಅಥವಾ ಮಾಧ್ಯಮ ಸಂಸ್ಥೆಗಳು ನೀಡಿದ ಆದೇಶ ಪ್ರತಿಗಳು, ಆಧಾರ್ ಕಾರ್ಡ್, ಎಸ್‌ಎಸ್‌ಎಲ್‌ಸಿ ತೇರ್ಗಡೆ ಪ್ರಮಾಣ ಪತ್ರ ಕನಿಷ್ಠ ಎರಡು ವರ್ಷಗಳ ಸೇವಾನುಭವದ ದೃಢೀಕರಣ ಪತ್ರ (ಹೊಸ ಅರ್ಜಿದಾರರಿಗೆ) ಎರಡು ಭಾವಚಿತ್ರಗಳು ಹಾಗೂ 510 ಶುಲ್ಕ

ತಾಲೂಕು ಮಟ್ಟದಲ್ಲಿ ಸಲ್ಲಿಕೆಯಾದ ಅರ್ಜಿಗಳನ್ನು ಆಯಾ ತಾಲೂಕು ಘಟಕಗಳ ಅಧ್ಯಕ್ಷರು ಮತ್ತು ಪ್ರಧಾನ ಕಾರ್ಯದರ್ಶಿಗಳು ಪರಿಶೀಲಿಸಿ ಮಾರ್ಚ್ 8ರೊಳಗೆ ಅರ್ಜಿ ಹಾಗೂ ಶುಲ್ಕದ ಮೊತ್ತವನ್ನು ಜಿಲ್ಲಾ ಸಮಿತಿಗೆ ರವಾನಿಸಬೇಕು.

ಸದಸ್ಯತ್ವ ಮಾರ್ಗಸೂಚಿಗಳನ್ನು ಮುಳಗುಂದ ರಸ್ತೆಯ ಪತ್ರಿಕಾ ಭವನದ ಸೂಚನಾ ಫಲಕದಲ್ಲಿ ಪ್ರಕಟಿಸಲಾಗಿದ್ದು, ಹೆಚ್ಚಿನ ಮಾಹಿತಿಗಾಗಿ ಸೂಚನಾ ಫಲಕವನ್ನು ವೀಕ್ಷಿಸಲು ಕೋರಲಾಗಿದೆ.

ಸದಸ್ಯತ್ವ ನೀಡುವ ವಿಚಾರದಲ್ಲಿ ರಾಜ್ಯ ಸಮಿತಿ ಸೂಚಿಸಿದ ಮಾನದಂಡಗಳನ್ನು ಕಟ್ಟುನಿಟ್ಟಾಗಿ ಪಾಲಿಸಲಾಗುವುದು ಎಂದು ಜಿಲ್ಲಾಧ್ಯಕ್ಷ ರಾಜು ಎಂ. ಹೆಬ್ಬಳ್ಳಿ ಹಾಗೂ ಪ್ರಧಾನ ಕಾರ್ಯದರ್ಶಿ ಶರಣು ದೊಡ್ಡೂರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಭೂತಾನವರ ಓಣಿಯಲ್ಲಿ ಸಂಪ್ರದಾಯಬದ್ಧ ಕಾಮರತಿ ಆಚರಣೆ



**■ ವಿಜಯಸಾಕ್ಷಿ ಸುದ್ದಿ, ಗದಗ**

ಸಮೀಪದ ಬೆಟಗೇರಿಯ ಭೂತಾನವರ ಓಣಿಯಲ್ಲಿ ಕಾಮರತಿ ಹಬ್ಬವನ್ನು ಸಂಪ್ರದಾಯಬದ್ಧವಾಗಿ ಭಕ್ತಿಭಾವದಿಂದ ಆಚರಿಸಲಾಗುತ್ತದೆ.

ಪ್ರಭು ಘಂಟೆಯವರ ಮನೆತನದವರು ಸುಮಾರು ಐವತ್ತು ವರ್ಷಗಳಿಂದ ನಿರಂತರವಾಗಿ ಕಾಮರತಿ ಇಟ್ಟು ಹಬ್ಬವನ್ನು ಆಚರಿಸುತ್ತಾ ಬಂದಿದ್ದಾರೆ. ಪ್ರತಿ ವರ್ಷವೂ ವಿಶೇಷ ಅಲಂಕಾರ, ಪೂಜೆ ಹಾಗೂ ನೈವೇದ್ಯದೊಂದಿಗೆ ಮೂರ್ತಿಗಳನ್ನು ಪ್ರತಿಷ್ಠಾಪಿಸಿ ಕುಟುಂಬದ ಸದಸ್ಯರು ಹಾಗೂ ಸ್ಥಳೀಯರು ಭಕ್ತಿಯಿಂದ ಪೂಜೆ ಸಲ್ಲಿಸುತ್ತಾರೆ.

ಹಬ್ಬದ ಅಂಗವಾಗಿ ಕಾಮರತಿ ಮೂರ್ತಿಗಳನ್ನು ಆಕರ್ಷಕವಾಗಿ ಅಲಂಕರಿಸಲಾಗಿದ್ದು, ಓಣಿಯಲ್ಲೆಲ್ಲಾ ಹಬ್ಬದ ಸಂಭ್ರಮ ಮನೆಮಾಡಿದೆ. ಮಹಿಳೆಯರು ಹಾಗೂ ಮಕ್ಕಳು ಭಾಗವಹಿಸಿ ಸಂಪ್ರದಾಯದ ವಿಧಿವಿಧಾನಗಳನ್ನು ನೆರವೇರಿಸಿದರು.

### ಕಸಾಪ ವತಿಯಿಂದ ಸಿರಸಂಗಿ ಲಿಂಗರಾಜರ ದತ್ತಿ ಉಪನ್ಯಾಸ

# ಸಮಾಜಕ್ಕೆ ಸಮರ್ಪಿತ ಬದುಕು ಅಜರಾಮರ

**■ ವಿಜಯಸಾಕ್ಷಿ ಸುದ್ದಿ, ಗದಗ**

ಸಂಸ್ಥಾನಕ್ಕೆ ಸಂಬಂಧಿಸಿದ ಎಲ್ಲ ಆಸ್ತಿಯನ್ನು ಸಮುದಾಯದ ಶಿಕ್ಷಣ, ಧರ್ಮ ಮತ್ತು ಸಾಮಾಜಿಕ ಕಲ್ಯಾಣಕ್ಕಾಗಿ ದಾನ ಮಾಡಿ ಭಾರತೀಯ ಸಂಸ್ಥಾನಿಕ ಆಡಳಿತಗಾರರಲ್ಲಿ ಅಗ್ರ ಸ್ಥಾನವನ್ನು ಪಡೆದವರು ಸಿರಸಂಗಿ ಲಿಂಗರಾಜರು. ಜನಸಾಮಾನ್ಯರ ಸಂಕಟಗಳಿಗೆ ದನಿಯಾಗಿ ಸರ್ವಾಂಗ ಸುಂದರ ಸಮಾಜದ ನಿರ್ಮಾಣಕ್ಕೆ ಶ್ರಮಿಸಿದರು. ಸಮಾಜಕ್ಕೆ ತಮ್ಮ ಬದುಕನ್ನು ಸಮರ್ಪಿಸಿ ಅಜರಾಮರಾಗಿದ್ದಾರೆ ಎಂದು ಮುಳಗುಂದ ಸರಕಾರಿ ಪದವಿಪೂರ್ವ ಮಹಾವಿದ್ಯಾಲಯದ ಪ್ರಾಚಾರ್ಯ ಡಾ. ವಿ.ಕೆ. ದ್ಯಾಮನಗೌಡ್ರ ತಿಳಿಸಿದರು.

ಅವರು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನಿಂದ ಡಾ. ತೋಂಟದ ಸಿದ್ಧಲಿಂಗಶ್ರೀ ಕನ್ನಡ ಭವನದಲ್ಲಿ ಜರುಗಿದ ಸಿರಸಂಗಿ ಲಿಂಗರಾಜರ ಸ್ಮರಣಾರ್ಥ ದತ್ತಿ ಉಪನ್ಯಾಸದಲ್ಲಿ ಮಾತನಾಡಿದರು.




ಆ ಸಂದರ್ಭದ ಎಲ್ಲ ಸಾಮಾಜಿಕ ಬದಲಾವಣೆಗೆ ಶ್ರಮಿಸಿದ ಸಂಘ ಸಂಸ್ಥೆಗಳಿಗೆ ಸಹಾಯಹಸ್ತ ಚಾಚಿ ಸಮಾಜೋನ್ನತಿಗೆ ಪ್ರಯತ್ನಿಸಿದರು. ಇವರ ಸಾಮಾಜಿಕ ಚಿಂತನೆಗಳು ಬ್ರಿಟಿಷ ಅಧಿಕಾರಿಗಳನ್ನು ಸೆಳೆದಿತ್ತು. ಕೃಷಿ, ಕೆರೆ ಅಭಿವೃದ್ಧಿ, ಶಿಕ್ಷಣಕ್ಕೆ ಪ್ರೋತ್ಸಾಹ, ಸಮಾಜ ಸಂಘಟನೆ, ಧಾರ್ಮಿಕ ಕ್ಷೇತ್ರಗಳ ಅಭಿವೃದ್ಧಿಗೆ ಕೊಡುಗೆ ನೀಡಿದ್ದಾರೆ. ಅವರ ಬದುಕಿನಲ್ಲಿ ಬರುವ ಅನೇಕ ಘಟನೆಗಳ ಕುರಿತು ಅಧ್ಯಯನ, ಸ್ಥಳ ಭೇಟಿ ಮಾಡಿ ಪುಸ್ತಕವೊಂದನ್ನು ರಚಿಸಿರುವುದಾಗಿ ಎಂದು ತಿಳಿಸಿದರು.

ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದ ಬಿ.ಜಿ. ಅಣ್ಣಿಗೇರಿ ಗುರುಗಳ ಪ್ರತಿಭಾ ಪ್ರತಿಷ್ಠಾನದ ಅಧ್ಯಕ್ಷ ಶಿವಕುಮಾರಗೌಡ ಪಾಟೀಲ ಮಾತನಾಡಿ, ಲಿಂಗರಾಜರ ತ್ಯಾಗ ಜೀವನ ಮಾದರಿಯಾದುದು. ಅನೇಕ ಸಂಕಷ್ಟಗಳ ಸುಳಿಯಲ್ಲಿ ಸಿಲುಕಿದರೂ ಸಮಾಜದ ಕುರಿತು ಸದಾ ಚಿಂತಿಸಿದರು. ಅವರ ದೂರದೃಷ್ಟಿಯ ಫಲವಾಗಿ ಈ ಭಾಗದ ಜನ ಶಿಕ್ಷಣವಂತರಾಗಲು ಸಾಧ್ಯವಾಯಿತು ಎಂದು ತಿಳಿಸಿದರು.

ಸೌಮ್ಯ ಕಡ್ಡಿಯವರ ವೇದಿಕೆ ಮೇಲೆ ಉಪಸ್ಥಿತರಿದ್ದರು. ಸತೀಶ ಚನ್ನಪ್ಪಗೌಡ್ರ ಸ್ವಾಗತಿಸಿದರು. ರಾಹುಲ ಗಿಡ್ನಂದಿ ನಿರೂಪಿಸಿದರು. ಜೆ.ಎ. ಪಾಟೀಲ ವಂದಿಸಿದರು.

ಕಾರ್ಯಕ್ರಮದಲ್ಲಿ ಕೆ.ಎಚ್. ಬೇಲೂರ, ರಾಜಶೇಖರ ದಾನರಡ್ಡಿ, ವಿದ್ಯಾಧರ ದೊಡ್ಡಮನಿ, ಡಾ. ರಶ್ಮಿ ಅಂಗಡಿ, ರತ್ನಾ ಪುರಂತರ, ಸುರೇಶ ಕುಂಬಾರ, ಬಿ.ಬಿ. ಹೊಳಗುಂದಿ, ಅಮರೇಶ ರಾಂಪೂರ, ರತ್ನಕ್ಕ ಪಾಟೀಲ, ಜೆ.ಎ. ಪಾಟೀಲ, ಎಂ.ಎಸ್. ಕಾಮನಹಳ್ಳಿ, ಈರನಗೌಡ ಮಣಕವಾಡ, ಎಸ್.ಡಿ. ಹೊನ್ನಪ್ಪನವರ, ಶೈಲಜಾ ಗಿಡ್ನಂದಿ, ಎಂ.ಎಫ್. ಡೋಣಿ, ಯಲ್ಲಪ್ಪ ವಸ್ತ್ರದ, ರವಿ ದೇವರಡ್ಡಿ, ಕೆ.ಎಸ್. ಬಾಳಿಕಾಯಿ, ನಾಗಪ್ಪ ಸುರಳಿಕೇರಿ, ಮಲ್ಲಿಕಾರ್ಜುನ ನಿಂಗೋಜಿ, ಎಸ್.ಯು. ಸಜ್ಜನಶೆಟ್ಟರ, ಎಸ್.ಬಿ. ಗೊಜನೂರ, ಸಂಗಪ್ಪ ಹೊನ್ನಪ್ಪನವರ, ಎಸ್.ಪಿ. ಹೊಂಬಳ, ಈಶ್ವರಪ್ಪ ಕುಬುಸದ, ಅಕ್ಕಮ್ಮ ಪಾರ್ವತಿಮಠ, ರಾಜೇಶ್ವರ ಬಡ್ನಿ, ಅನಸೂಯಾ ಮಿಟ್ಟಿ, ಸತೀಶ ಕುಲಕರ್ಣಿ, ಕೆ.ಎಸ್. ಪಲ್ಲೇದ, ಬಿ.ಎಂ. ಅಂಗಡಿ ಮೊದಲಾದವರು ಭಾಗವಹಿಸಿದ್ದರು.

ಅಧ್ಯಕ್ಷತೆ ವಹಿಸಿದ್ದ ಜಿಲ್ಲಾ ಕಸಾಪ ಅಧ್ಯಕ್ಷ ವಿವೇಕಾನಂದಗೌಡ ಪಾಟೀಲ ಮಾತನಾಡಿ, ಭಾರತವನ್ನು ಅನೇಕ ರಾಜ ಮನೆತನಗಳು, ಸಂಸ್ಥಾನಗಳು ಆಳ್ವಿಕೆಯನ್ನು ಮಾಡಿವೆ. ರಾಜ ವೈಭವವನ್ನು ಬದಿಗೊತ್ತಿ ಜನಪರ ಆಡಳಿತ ಮಾಡಿದ ವ್ಯಕ್ತಿಗಳು ಮಾತ್ರ ಸದಾ ಸ್ಮರಣೀಯರಾಗಿದ್ದಾರೆ. ಅರಮನೆಗಳು, ಕೋಟೆ ಕೊತ್ತಲು ಅಳಿದರೂ ಮಾಡಿದ ಜನಪರ ಕೆಲಸದ ಕುರುಹುಗಳು ಸದಾ ಜೀವಂತವಾಗಿವೆ. ನವಲಗುಂದ ಸಿರಸಂಗಿ ಟ್ರಸ್ಟ್ ಸ್ಥಾಪಿಸಿ ಸಾವಿರಾರು ವಿದ್ಯಾರ್ಥಿಗಳ ಬದುಕಿಗೆ ಬೆಳಕಾಗಿದ್ದಾರೆ ಎಂದು ತಿಳಿಸಿದರು.

### ಗದಗ ಜಿಲ್ಲಾ ವೀರಶೈವ ಮಹಾಸಭಾದಿಂದ ಪೂಜ್ಯ ಪುಟ್ಟರಾಜರ ಜಯಂತಿ

# ಅಂಧ-ಅನಾಥರ ಬದುಕಿಗೆ ಬೆಳಕಾದ ಪುಟ್ಟರಾಜರು




**■ ವಿಜಯಸಾಕ್ಷಿ ಸುದ್ದಿ, ಗದಗ**

ಲಿಂ. ಡಾ. ಪಂ. ಪುಟ್ಟರಾಜ ಕವಿ ಗವಾಯಿಗಳವರು ಅಂಧ, ಅನಾಥ, ವಿಕಲಚೇತನರ ಬದು-ಕಿಗೆ ಬೆಳಕಾಗಿ, ಭಕ್ತರ ಹೃದಯ ಮಂದಿರದಲ್ಲಿ ದೇವರಾಗಿ ಪೂಜಿತರಾದ ಪುಣ್ಯಾತ್ಮರಾಗಿದ್ದರು ಎಂದು ಅಖಿಲ ಭಾರತ ವೀರಶೈವ ಮಹಾಸಭಾದ ಗದಗ ಜಿಲ್ಲಾ ಅಧ್ಯಕ್ಷ ಶರಣಬಸಪ್ಪ ಗುಡಿಮನಿ ಹೇಳಿದರು.

ಅವರು ಮಂಗಳವಾರ ನಗರದ ವೀರಶೈವ ಜನರಲ್ ಲೈಬ್ರರಿಯ ಆವರಣದಲ್ಲಿರುವ ವೀರಶೈವ ಮಹಾಸಭಾದ ಕಾರ್ಯಾಲಯದಲ್ಲಿ ಏರ್ಪಡಿಸಿದ್ದ ಪೂಜ್ಯ ಪುಟ್ಟರಾಜ ಗವಾಯಿಗಳವರ ಜಯಂತಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಪೂಜ್ಯ ಗುರು ಪಂಚಾಕ್ಷರ ಗವಾಯಿಗಳವರ ನೆಚ್ಚಿನ ಶಿಷ್ಯರಾಗಿದ್ದ ಪುಟ್ಟರಾಜರು ಗುರುವನ್ನು ಮೀರಿಸಿ ಸಾಧನೆ ಮಾಡಿದವರು. ಸಂಗೀತ ಕ್ಷೇತ್ರದಲ್ಲಿ ದಿಗ್ಗರಾಗಿದ್ದರು. ಕಣ್ಣಿಲ್ಲದಿದ್ದರೂ ಕಣ್ಣಿದ್ದವರು ಕಣ್ತೆರೆದು ಅಧ್ಯಯನ ಮಾಡುವಂತಹ ಅಪೂರ್ವವಾದ ಗ್ರಂಥಗಳನ್ನು ರಚಿಸಿದ ತ್ರಿಭಾಷಾ ಸಾಹಿತಿಗಳು, ತ್ರಿಕಾಲ ಪೂಜಾನಿಷ್ಠರಾಗಿದ್ದರು ಎಂದು ಬಣ್ಣಿಸಿದರು.

ಅಂಧ, ಅನಾಥ, ವಿಕಲಚೇತನರು ಹೆತ್ತವರಿಗೆ ಭಾರವಾಗಿ ಮಾರ್ಕೆಟ್, ಬಸ್‌ಸ್ಟ್ಯಾಂಡ್, ರೇಲ್ವೆ ಸ್ಟೇಷನ್‌ಗಳಲ್ಲಿ ಭಿಕ್ಷೆಯನ್ನು ಬೇಡಿ ಜೀವನ ನಡೆಸಬೇಕಾದ ಪರಿಸ್ಥಿತಿಯುಳ್ಳವರಿಗೆ ಬದುಕಿಗೆ ಬೆಳಕಾದವರು. ವೀರೇಶ್ವರ ಪುಣ್ಯಾಶ್ರಮದಲ್ಲಿ ಇಂತಹ ವ್ಯಕ್ತಿಗಳಿಗೆ ಉಚಿತ ವಸತಿ, ಅನ್ನ, ಶಿಕ್ಷಣ ನೀಡುವ ಮೂಲಕ ಅವರು ಸಂಗೀತವನ್ನು ಕರಗತ ಮಾಡಿಕೊಂಡು ಸ್ವತಂತ್ರವಾಗಿ ಜೀವನ ನಡೆಸುವಂತೆ ಮಾಡಿದವರು. ಅಂತೆಯೇ ಇವರ ಸಾವಿರಾರು ಕಲಾವಿದರು ನಾಡಿನಲ್ಲಿ, ದೇಶ ವಿದೇಶಗಳಲ್ಲಿ ಶ್ರೇಷ್ಠ ಸಂಗೀತ ಕಲಾವಿದರಾಗಿದ್ದಾರೆ, ಉನ್ನತ ಹುದ್ದೆಯಲ್ಲಿದ್ದಾರೆ ಎಂದರು.

ಸಮಾರಂಭದಲ್ಲಿ ಸಿ.ಕೆ. ಕಡಣಿ ಶಾಸ್ತ್ರೀ, ವ್ಹಿ.ಕೆ. ಗುರುಮಠ, ಎಸ್.ಐ. ಯಾಳಗಿ, ಜಿ.ಎಸ್. ಹಿರೇಮಠ, ರಾಜು ಕುರಡಗಿ ಪುಟ್ಟರಾಜ ಬದುಕು, ಸಾಧನೆ ಕುರಿತು ವಿವರವಾಗಿ ಮಾತನಾಡಿದರು.

ಮಹಾಸಭಾದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಮುರುಘರಾಜೇಂದ್ರ ಬಡ್ನಿ ಸ್ವಾಗತಿಸಿದರು. ಖಜಾಂಚಿ ಚನ್ನವೀರಪ್ಪ ಹುಣಶಿಕಟ್ಟಿ ನಿರೂಪಿಸಿ ವಂದಿಸಿದರು. ಕಾರ್ಯಕ್ರಮದಲ್ಲಿ ನಿವೃತ್ತ ತಹಸೀಲ್ದಾರ ಎ.ಟಿ. ನರೇಗಲ್ಲ, ಬಿ.ಎ. ಪಾಟೀಲ, ಎಂ.ಬಿ. ಚನ್ನಪ್ಪಗೌಡ್ರ, ಸಿದ್ದಣ್ಣ ಜೀವನಗೌಡ್ರ ಸೇರಿದಂತೆ ಮಹಾಸಭಾದ ಆಜೀವ ಸದಸ್ಯರು, ಭಕ್ತಾಧಿಗಳು ಪಾಲ್ಗೊಂಡಿದ್ದರು.

### ಲೋಗೋ ಬಿಡುಗಡೆ

ಗದುಗಿನ ಕಲಾ ವಿಕಾಸ ಪರಿಷತ್ತು 25ನೇ ವರ್ಷದ ಸಂಭ್ರಮಾಚರಣೆ ಆಚರಿಸಿಕೊಳ್ಳುತ್ತಿದ್ದು, ಈ ಕುರಿತಾದ ಲೋಗೋವನ್ನು ವೀರಶೈವ ಮಹಾಸಭಾದ ಗದಗ ಜಿಲ್ಲಾ ಅಧ್ಯಕ್ಷ ಶರಣಬಸಪ್ಪ ಗುಡಿಮನಿ ಬಿಡುಗಡೆಗೊಳಿಸಿ 2026 ವರ್ಷವನ್ನು ಕಲಾ ವಿಕಾಸ ಪರಿಷತ್ತಿನ ವರ್ಷಾಚರಣೆಯು ಸಂಭ್ರಮದಿಂದ ಆಚರಿಸುವಂತಾಗಲಿ ಎಂದರು.

## ಸರಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜಿಗೆ ನೂತನ ಪ್ರಾಚಾರ್ಯರಾಗಿ ಪ್ರಕಾಶ ಡಿ. ಕರಿಗಾರ ಅಧಿಕಾರ ಸ್ವೀಕಾರ



**■ ವಿಜಯಸಾಕ್ಷಿ ಸುದ್ದಿ, ಗದಗ**


ನಗರದ ಹಳೆ ನ್ಯಾಯಾಲಯ ಕಟ್ಟಡದಲ್ಲಿರುವ ಪ್ರತಿಷ್ಠಿತ ಸರಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜುಗೆ ನೂತನ ಪ್ರಾಚಾರ್ಯರಾಗಿ ಸಹ ಪ್ರಾಧ್ಯಾಪಕ ಪ್ರಕಾಶ ಡಿ. ಕರಿಗಾರ ಅಧಿಕಾರ ಸ್ವೀಕರಿಸಿದರು.

ಅಧಿಕಾರ ಸ್ವೀಕರಿಸಿದ ನಂತರ ಮಾತನಾಡಿದ ಅವರು, ಕಾಲೇಜಿನ ಶೈಕ್ಷಣಿಕ ಮಟ್ಟವನ್ನು ಇನ್ನಷ್ಟು ಉನ್ನತ ಮಟ್ಟಕ್ಕೆ ಕೊಂಡೊಯ್ಯುವ ಸಂಕಲ್ಪ ವ್ಯಕ್ತಪಡಿಸಿದರು. ವಿದ್ಯಾರ್ಥಿನಿಯರಿಗೆ ಗುಣಮಟ್ಟದ ಶಿಕ್ಷಣ ನೀಡುವುದಕ್ಕೆ ಆದ್ಯತೆ ನೀಡಲಾಗುವುದು ಎಂದು ತಿಳಿಸಿದರು. ವಿದ್ಯಾರ್ಥಿಗಳ ಸಮಗ್ರ ವ್ಯಕ್ತಿತ್ವ ವಿಕಾಸಕ್ಕೆ ವಿವಿಧ ಶೈಕ್ಷಣಿಕ ಹಾಗೂ ಸಾಂಸ್ಕೃತಿಕ ಚಟುವಟಿಕೆಗಳನ್ನು ಆಯೋಜಿಸಲಾಗುವುದು ಎಂದರು.

ಈ ಸಂದರ್ಭದಲ್ಲಿ ಕಾಲೇಜಿನ ಉಪನ್ಯಾಸಕರು ಹಾಗೂ ಸಿಬ್ಬಂದಿ ವರ್ಗದವರು ನೂತನ ಪ್ರಾಚಾರ್ಯರಿಗೆ ಹೂಗುಚ್ಛ ನೀಡಿ ಶುಭಾಶಯ ಕೋರಿದರು. ಅವರ ನಾಯಕತ್ವದಲ್ಲಿ ಕಾಲೇಜಿನ ಶೈಕ್ಷಣಿಕ ಹಾಗೂ ಅಭಿವೃದ್ಧಿ ಕಾರ್ಯಗಳು ಇನ್ನಷ್ಟು ಚುರುಕುಗೊಳ್ಳಲಿ ಎಂದು ಹಾರೈಸಿದರು.

ಕಾರ್ಯಕ್ರಮದಲ್ಲಿ ಪ್ರೋ. ಎ.ಕೆ. ಜಮಾದಾರ, ಡಾ. ಶಾಂತವ್ವ ಪೂಜಾರ, ಪ್ರೊ. ಎಸ್.ಯು. ಸಜ್ಜನಶೆಟ್ಟರ, ವ್ಯವಸ್ಥಾಪಕರು ಎಸ್.ಎಫ್. ಕರಬುಡ್ಡಿ, ಪ್ರೋ. ಆರೀಫ್ ಸದರಸೋಪೆವಾಲೆ, ಪ್ರೊ. ತೇಜಶ್ವಿನಿ, ಅಧೀಕ್ಷಕರು ರಾಜೇಶ್ವರಿ ಬದ್ನಿಕಾಯಿ, ಅತಿಥಿ ಉಪನ್ಯಾಸಕರು, ಸಿಬ್ಬಂದಿ ವರ್ಗ, ಗಣ್ಯರು ಹಾಗೂ ವಿದ್ಯಾರ್ಥಿನಿಯರು ಉಪಸ್ಥಿತರಿದ್ದರು.

# ಮೂಲ ಸಂಸ್ಕೃತಿ ಮರೆತರೆ ಕಷ್ಟ ತಪ್ಪಿದ್ದಲ್ಲ




**■ ವಿಜಯಸಾಕ್ಷಿ ಸುದ್ದಿ, ಬಾಳೆಹೊನ್ನೂರು**

ಮನುಷ್ಯ ಯಾವಾಗಲೂ ಸುಖವನ್ನೇ ಬಯಸುತ್ತಾನೆ. ಆದರೆ ಅದಕ್ಕೆ ಕಾರಣವಾಗಿರುವ ಅರಿವು, ಆದರ್ಶಗಳಿಂದ ದೂರ ಇರುತ್ತಾನೆ. ಮನುಷ್ಯ ಎಷ್ಟೇ ಎತ್ತರಕ್ಕೆ ಬೆಳೆದರೂ ಮೂಲ ಸಂಸ್ಕೃತಿ ಮರೆಯಬಾರದು. ಮೂಲ ಸಂಸ್ಕೃತಿ ನಿರ್ಲಕ್ಷಿಸಿದರೆ ಜೀವನದಲ್ಲಿ ಕಷ್ಟ ತಪ್ಪಿದ್ದಲ್ಲವೆಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಮಂಗಳವಾರ ಶ್ರೀ ಜಗದ್ಗುರು ರಂಭಾಪುರಿ ಪೀಠದಲ್ಲಿ ಶ್ರೀ ಜಗದ್ಗುರು ರೇಣುಕಾಚಾರ್ಯ ಜಯಂತಿ ಯುಗಮಾನೋತ್ಸವ ಹಾಗೂ ಕ್ಷೇತ್ರನಾಥ ಶ್ರೀ ವೀರಭದ್ರಸ್ವಾಮಿ ಮಹಾರಥೋತ್ಸವದ ಅಂಗವಾಗಿ ಜರುಗಿದ ಹುಣ್ಣಿಮೆ ವಸಂತೋತ್ಸವ ಮತ್ತು ಸುರಗಿ ಸಮಾರಾಧನಾ ಧರ್ಮ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಮನುಷ್ಯನಾಗಿ ಬಾಳುವುದು ಸುಲಭ. ಆದರೆ ಮಾನವೀಯತೆಯಿಂದ ನಡೆಯುವುದು ತುಂಬಾ ಕಷ್ಟ. ಜಾತಿ-ಮತ ಭ್ರಾಂತಿಯಲ್ಲಿ ಶಾಂತಿ ಎಂದಿಗೂ ಸಿಗಲಾರದು. ಮೌಲ್ಯಗಳ ಉಳಿವು-ಅಳಿವು ಮಾನವನ ಆಚರಣೆಯಲ್ಲಿದೆ. ನೀತಿವಂತರು ನಿರಾಶರಾಗದೇ ಧರ್ಮವಂತರಾಗಿ ನಡೆಯಬೇಕಾಗುತ್ತದೆ. ನೀತಿ ಸಂಹಿತೆಯನ್ನು ಅರಿತವನಿಗೆ ನೆಮ್ಮದಿಯ ಫಲ. ಬರುವ ಅಡ್ಡಿ ಆತಂಕಗಳನ್ನು ದಿಟ್ಟತನದಿಂದ ಎದುರಿಸಿ ಶುದ್ಧ ಮನಸ್ಸಿನಿಂದ ಮುನ್ನಡೆದರೆ ಶ್ರೇಯಸ್ಸು ಪ್ರಾಪ್ತವಾಗುವುದರಲ್ಲಿ ಯಾವುದೇ ಸಂದೇಹವಿಲ್ಲ. ದೈವ ಸಾನ್ನಿಧ್ಯದಲ್ಲಿ ನಮ್ಮ ಭಕ್ತಿ, ಶ್ರದ್ಧೆ, ನಿಷ್ಠೆ ಗಟ್ಟಿಯಾಗಿದ್ದರೆ ಬದುಕು ಉಜ್ವಲಗೊಳ್ಳುತ್ತದೆ ಎಂದರು.

ಜಾತ್ರಾ ಮಹೋತ್ಸವದ ಅಂಗವಾಗಿ ನಡೆದ ಕೊನೆಯ ದಿನ ಹುಣ್ಣಿಮೆ ವಸಂತೋತ್ಸವ ಆಚರಿಸಿ ಭದ್ರಾ ನದಿ ತೀರದಲ್ಲಿ ಸುರಗಿ ಸಮಾರಾಧನಾ ಅಂಗವಾಗಿ ಇಷ್ಟಲಿಂಗ ಮಹಾಪೂಜಾ ನೆರವೇರಿಸಿ ಶ್ರೀ ರಂಭಾಪುರಿ ಜಗದ್ಗುರುಗಳು ಭಕ್ತ ಸಂಕುಲಕ್ಕೆ ಶುಭ ಹಾರೈಸಿದರು. ಎಡೆಯೂರು, ಸಿದ್ಧರಬೆಟ್ಟ, ಮಳಲಿ, ಚಿಮ್ಮಲಗಿ, ಸುಳ್ಳ, ಸಗರ, ಮೈಸೂರು, ತೆಂಡೇ-ಕೆರೆ ಶ್ರೀಗಳನ್ನು ಮೊದಲ್ಗೊಂಡು 25ಕ್ಕೂ ಹೆಚ್ಚು ಮಠಾಧೀಶರು ಪಾಲ್ಗೊಂಡಿದ್ದರು.

## ಬೂದಿಹಾಳ ಗ್ರಾಮಸ್ಥರಿಂದ ಶ್ರೀಶೈಲಕ್ಕೆ ಪಾದಯಾತ್ರೆ



**■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಸಮೀಪದ ಬೂದಿಹಾಳ ಗ್ರಾಮಸ್ಥರು ಆಂಧ್ರಪ್ರದೇಶದ ಶ್ರೀಶೈಲ ಕ್ಷೇತ್ರ ಸತತ 24ನೇ ವರ್ಷದ ಪಾದಯಾತ್ರೆಯನ್ನು ಮಂಗಳವಾರ ಪ್ರಾರಂಭಿಸಿದರು. ಯುಗಾದಿಯಂದು ಜರಗುವ ಮಲ್ಲಿಕಾರ್ಜುನ ಜಾತ್ರೆಯಲ್ಲಿ ಪಾಲ್ಗೊಳ್ಳಲು ನೂರಾರು ಸಂಖ್ಯೆಯ ಶಿವಭಕ್ತರು ಶ್ರೀ ಕಲೇಶ್ವರ ಭಕ್ತಮಂಡಳಿಯೊಂದಿಗೆ 12 ದಿನಗಳ ಪಾದಯಾತ್ರೆ ಕೈಗೊಂಡರು.

ಬೆಳಿಗ್ಗೆ ಶ್ರೀ ಕಲ್ಮೇಶ್ವರ ದೇವಸ್ಥಾನದಲ್ಲಿ ಜಮಾಯಿಸಿದ ಭಕ್ತರು ವಿಶೇಷ ಪೂಜೆ ಕೈಗೊಂಡರು. ಬೂದಿಹಾಳ, ಮಾಳವಾಡ, ಕುರಹಟ್ಟಿ, ತುಪ್ಪದ ಕುರಹಟ್ಟಿ, ತೊಂಡಿಹಾಳ, ಅಬ್ಬಿಗೇರಿ, ಹಾಲಕೆರೆ, ನೀರಲಗಿ ಗ್ರಾಮ ಸೇರಿದಂತೆ ಸುತ್ತುಮುತ್ತಲಿನ ಊರುಗಳಿಂದ 100ಕ್ಕೂ ಹೆಚ್ಚು ಭಕ್ತರು ಪಾಲ್ಗೊಂಡಿದ್ದರು. ಈ ವೇಳೆ ಸುದ್ದಿಗಾರರೊಂದಿಗೆ ಮಾತನಾಡಿದ ಬಸವನಗೌಡ ಪಾಟೀಲ, ಸತತ 24 ವರ್ಷಗಳಿಂದ ಗ್ರಾಮದ ಕಲ್ಲಯ್ಯಜ್ಜ ಹಿರೇಮಠ ಇವರ ನೇತೃತ್ವದಲ್ಲಿ ನಾವು ಶ್ರೀಶೈಲ ಮಲ್ಲಯ್ಯನ ಪಾದಯಾತ್ರೆ ಮಾಡುತ್ತಾ ಬಂದಿದ್ದೇವೆ. ದಾರಿಯುದ್ದಕ್ಕೂ ಹಲವಾರು ದಾನಿಗಳು ನಮಗೆ ಊಟ ಮತ್ತು ವಸತಿಗೆ ಯಾವುದೇ ತೊಂದರೆಯಾಗದಂತೆ ವ್ಯವಸ್ಥೆ ಮಾಡಿರುತ್ತಾರೆ ಎಂದರು.

ಪ್ರತಿದಿನ 40ರಿಂದ 50 ಕಿ.ಮೀ.ನಂತೆ 500ಕ್ಕೂ ಹೆಚ್ಚು ಕಿ.ಮೀ. ನಡೆದು ಶ್ರೀಶೈಲ ತಲುಪಿ ದೇವರ ದರ್ಶನ ಪಡೆಯುತ್ತೇವೆ. ಕರ್ನೂಲು ದಾಟುತ್ತಿದ್ದಂತೆ ಬೆಟ್ಟ ಗುಡ್ಡಗಳ ನಡುವೆ ನಡಿಗೆ ಕಠಿಣವಾಗುತ್ತದೆ. ಇಂಥ ದುರ್ಗಮ ದಾರಿ ತುಳಿದು ಮಲ್ಲಯ್ಯನ ದರ್ಶನ ಪಡೆದು ರಥೋತ್ಸವದಲ್ಲಿ ಪಾಲ್ಗೊಳ್ಳುತ್ತಿದ್ದಂತೆ ನಡೆದು ಬಂದ ಆಯಾಸವೆಲ್ಲ ಮರೆತು ಹೋಗುತ್ತದೆ. ಮಲ್ಲಯ್ಯನ ಆಶೀರ್ವಾದದಿಂದ ನಮಗೆ ಯಾವ ತೊಂದರೆಯೂ ಆಗಿಲ್ಲ. ಮಲ್ಲಯ್ಯನ ಸೇವೆ, ನಮ್ಮ ನಂಬಿಕೆಯೊಂದಿಗೆ 24 ವರ್ಷಗಳಿಂದ ಯಾತ್ರೆ ನಡೆಯುತ್ತಿದೆ. ಈ ಯಾತ್ರೆ ಭಕ್ತಿ ಸಮರ್ಪಣೆಗೊಂದು ಅವಕಾಶ ಕಲ್ಪಿಸುತ್ತದೆ ಎನ್ನುತ್ತಾರೆ ಪಾದಯಾತ್ರಿಕ ಕಲ್ಲಯ್ಯಜ್ಜ ಹಿರೇಮಠ.

ಪಾದಯಾತ್ರೆಯು ಬೂದಿಹಾಳ, ನಿಡಗುಂದಿ, ಗಜೇಂದ್ರಗಡ, ಕುಷ್ಟಗಿ, ಛತ್ರ, ದೇಸಾಯಿ ಭೋಗಾಪುರ, ಪೋತ್ನಾಳ ಕ್ರಾಸ್, ಕರ್ನಾಟಕದ ಕೊನೆಯ ಹಳ್ಳಿ ಜಾಹಗೀರಪನ್ನೂರ, ಆಂಧ್ರದ ಕರೆಹೊಳ್ಳಿ, ಕರ್ನೂಲ್, ಆತ್ಮಕೂರ, ವೆಂಕಟಾಪೂರ ಮಾರ್ಗವಾಗಿ ಮಾ. 14ರಂದು ಶ್ರೀಶೈಲಂ ಕ್ಷೇತ್ರವನ್ನು ತಲುಪುತ್ತದೆ.

## ಸಮಾಜ ಸುಧಾರಣೆಯಲ್ಲಿ ವಚನಗಳ ಪಾತ್ರ ಹಿರಿದು

**■ ವಿಜಯಸಾಕ್ಷಿ ಸುದ್ದಿ, ಬೆಟಗೇರಿ**

ದೇವರ ದಾಸಿಮಯ್ಯನವರ 38ನೇ ಹುಣ್ಣಿಮೆ ವಚನ ವಾಚನ ಕಾರ್ಯಕ್ರಮ ಬೆಟಗೇರಿಯಲ್ಲಿ ಜರುಗಿತು. ವಚನ ಪಿತಾಮಹ ಶ್ರೀ ದೇವರ ದಾಸಿಮಯನವರ ಪುತ್ಥಳಿಗೆ ರಾಮಣ್ಣ ಗಂಜಿ ಪೂಜೆ ಸಲ್ಲಿಸಿದರು.

ನಿವೃತ್ತ ಶಿಕ್ಷಕ ಹಾಗೂ ಸಾಹಿತಿಗಳಾದ ರಾಮಚಂದ್ರ ಹುಬ್ಬಳ್ಳಿ ವಚನ ವಾಚಿಸಿದರು. ದೊಡ್ಡಪ್ಪ ಮೂಲಿಮನಿಯವರು ದೇವರ ದಾಸಿಮಯ್ಯನವರ ವಚನ ವಾಚನ ತಾತ್ಪರ್ಯದೊಂದಿಗೆ ಮಾತನಾಡಿದರು. ವಚನ ಸಾಹಿತ್ಯದ ಮೂಲಪುರುಷ ದೇವರ ದಾಸಿಮಯ್ಯನವರ ವಚನಗಳು ಸಮಾಜದ ಸುಧಾರಣೆಗೆ ಕಾರಣವಾಗಿವೆ ಎಂದು ಶಿವಣ್ಣ ಮಾಗುಂಡ ಹೇಳಿದರು.

ದಶರಥರಾಜ ಕೊಳ್ಳಿ ಸ್ವಾಗತಿಸಿದರು. ಅಶೋಕ್ ಬಣ್ಣದ, ಸೀತಾರಾಮ ದುತ್ತರಗಿ, ಮನೋಜ ಬಾಪುರೆ, ಶಂಕ್ರಪ್ಪ ತೊಂಡಿಹಾಳ ಕಲ್ಮೇಶ್ವರಯ್ಯ ಹಿರೇಮಠ, ಸಂದೇಶ್ ಹುಬ್ಬಳ್ಳಿ, ಶಂಕ್ರಪ್ಪ ಗಂಜಿ, ಶ್ರೀನಿವಾಸ ಹುಬ್ಬಳ್ಳಿ ಸಂಕಣ್ಣ ಗಂಜಿ, ಶಂಕ್ರಪ್ಪ ತೊಂಡಿಹಾಳ, ಮನೋಜ್ ಬಾಪುರಿ, ಸೋಮು ನಂದರಗಿ, ಚಂದ್ರು ಕಾಟಮ್ ಮುಂತಾದವರು ಭಾಗವಹಿಸಿದ್ದರು.



VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka